ವಿಜಯಪುರ | ಸಂಪುಟ 04 | ಸಂಚಿಕೆ 119 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com
RNI NO: KARKAN/2023/86203
ಬುಧವಾರ, ಜುಲೈ, 01, 2026

"ಸಿದ್ದರಾಮಯ್ಯ ಅವರ ವೇಗ ಏಕೆ ಕಡಿಮೆ ಆಯಿತು ಎಂದು ಅವರನ್ನೆ ಕೇಳಿ. ನಾವು ಅವರಿಗೆ ಓಡಬೇಕು ಎಂದು ಹೇಳುತ್ತೇವೆ. ರಾಜಕೀಯ ಎಂದರೆ ಓಟ ಇದ್ದಂತೆ, ಇಲ್ಲದಿದ್ದರೆ ಕೆಲಸ ಆಗಲ್ಲ. ಯಾರು ಸ್ಪರ್ಧೆ ಮಾಡುತ್ತಾರೆ ಅವರು ಉಳಿತಾರೆ. ಇಲ್ಲದಿದ್ದರೆ ಜನ ಮರೆಯುತ್ತಾರೆ."



■ ಸತೀಶ್ ಜಾರಕಿಹೊಳಿ
ಲೋಕೋಪಯೋಗಿ ಸಚಿವರು

## ಸಮಗ್ರ ಮತದಾರರ ಪರಿಷ್ಕರಣೆ ಪ್ರಕ್ರಿಯೆ ಆರಂಭ



### ಎಂಎಲ್ಸಿ ಸುನೀಲಗೌಡ ಪಾಟೀಲ ನಿವಾಸಕ್ಕೆ ಆಗಮಿಸಿದ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯದಲ್ಲಿ ಸಮಗ್ರ ಮತದಾರರ ಪರಿಷ್ಕರಣೆ (ಖಖಖ) ಪ್ರಕ್ರಿಯೆ ಇಂದಿನಿಂದ ಪ್ರಾರಂಭವಾಗಿದ್ದು, ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಅವರು ತಮ್ಮ ನಿವಾಸಕ್ಕೆ ಆಗಮಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ತಮ್ಮ ನಿವಾಸಕ್ಕೆ ಆಗಮಿಸಿದ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಮತಗಟ್ಟೆ ಸಂಖ್ಯೆ 46ರ ಅಧಿಕಾರಿಗಳಾದ ಅಜೀತ ಬಿಜ್ಜೂರ ಹಾಗೂ ಫಯಾಜ್ ಮಂಡೆ ಅವರು ಶಾಸಕರಿಂದ ಮಾಹಿತಿ ಸಂಗ್ರಹಿಸಿದರು.

ಈ ಸಂದರ್ಭದಲ್ಲಿ ಅಗತ್ಯವಾದ ಎಲ್ಲ ಮಾಹಿತಿಯನ್ನು ಒದಗಿಸಿದ ಶಾಸಕರು, ಪ್ರತಿಯೊಬ್ಬರು ಈ ಪ್ರಕ್ರಿಯಲ್ಲಿ ಪಾಲ್ಗೊಂಡು ಮತದಾರರ ಪಟ್ಟಿಯಲ್ಲಿ ತಮ್ಮ ಹಾಗೂ ಕುಟುಂಬ ಸದಸ್ಯರ ಹೆಸರುಗಳು ಮುಂದುವರೆಯುವುದನ್ನು ಖಚಿತ ಪಡಿಸಿಕೊಳ್ಳಬೇಕು ಎಂದು ಹೇಳಿದರು.

## ನಂದಿ ಸಕ್ಕರೆ ಕಾರ್ಖಾನೆಯಲ್ಲಿ ರೂ. 12.33 ಕೋಟಿ ಕಬ್ಬು ತೂಕ ವಂಚನೆ

### ಪ್ರಕರಣ ಭೇದಿಸಿದ ವಿಜಯಪುರ ಜಿಲ್ಲೆಯ ಬಬಲೇಶ್ವರ ಪೊಲೀಸರು । 8 ಆರೋಪಿಗಳ ಬಂಧನ । ರೂ. 11.32 ಕೋಟಿ ವಶ । ವಿಜಯಪುರ ಜಿಲ್ಲೆಯ ಎಸ್ಪಿ ಲಕ್ಷ್ಮಣ ನಿಂಬರಗಿ ಮಾಹಿತಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಂದಿ ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬಿನ ತೂಕದಲ್ಲಿ ಅಕ್ರಮ ನಡೆಸಿ ಕೋಟ್ಯಂತರ ರೂಪಾಯಿ ಹಣ ದುರುಪಯೋಗ ಮಾಡಿದ ಬಹುಕೋಟಿ ವಂಚನೆ ಪ್ರಕರಣವನ್ನು ಬಬಲೇಶ್ವರ ಪೊಲೀಸರು ಭೇದಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ 8 ಆರೋಪಿಗಳನ್ನು ಬಂಧಿಸಿ ರೂ.11.32 ಕೋಟಿಗೂ ಅಧಿಕ ಹಣವನ್ನು ವಶಪಡಿಸಿಕೊಂಡಿದ್ದಾರೆ.

ನಗರದಲ್ಲಿ ಮಂಗಳವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಈ ಪ್ರಕರಣದ ಕುರಿತು ಮಾಹಿತಿ ನೀಡಿದರು.

ಬಬಲೇಶ್ವರ ಪೊಲೀಸ್ ಠಾಣೆಯಲ್ಲಿ ಜೂನ್ 12, 2026 ರಂದು ಪ್ರಕರಣ ಸಂಖ್ಯೆ 29/2026ರಡಿ ಃಓಖ ಕಾಯ್ದೆಯ ಸೆಕ್ಷನ್ 316(2), 316(4), 316(5) ಹಾಗೂ 318(4) ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

ನಂದಿ ಸಕ್ಕರೆ ಕಾರ್ಖಾನೆಯ ಪ್ರಧಾನ ವ್ಯವಸ್ಥಾಪಕ ಅಶೋಕ ಸಂಗಪ್ಪ ತಿಪ್ಪರೆಡ್ಡಿ ಅವರು ನೀಡಿದ ದೂರಿನ ಮೇರೆಗೆ, ಕಾರ್ಖಾನೆಯ ಕಬ್ಬು ತೂಕ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ ಧರಪ್ಪ ದುಂಡಪ್ಪ ನಾವಿ ಹಾಗೂ ಇತರರು ಸೇರಿ 2020–21ರಿಂದ 2025–26ರ ವರೆಗೆ ಆರು ಹಂಗಾಮುಗಳಲ್ಲಿ ಕೃತಕ ಟೋಕನ್ ಹಾಗೂ ಬೋಗಸ್ ಬಿಲ್‌ಗಳನ್ನು ಸೃಷ್ಟಿಸಿ ರೈತರ ಹೆಸರಿನಲ್ಲಿ ಹಣ ದುರುಪಯೋಗ ಮಾಡಿಕೊಂಡಿರುವ ಆರೋಪ ಕೇಳಿಬಂದಿತ್ತು.

ತನಿಖೆಯಲ್ಲಿ ಬಯಲಾದ ಅಂಶಗಳು: ಪೊಲೀಸರ ತನಿಖೆಯಲ್ಲಿ ಆರೋಪಿಗಳು ಕಾರ್ಖಾನೆಯ ತೂಕ ಮಾಪನ ವ್ಯವಸ್ಥೆಯಲ್ಲಿದ್ದ ಕೆಲ ಸಿಬ್ಬಂದಿಯ ಸಹಕಾರದೊಂದಿಗೆ ನಕಲಿ ಟೋಕನ್‌ಗಳನ್ನು ಸೃಷ್ಟಿಸಿ, ಕಬ್ಬು ಸಾಗಣೆ ವಾಹನಗಳ ತೂಕಕ್ಕೆ ಹೊಂದಾಣಿಕೆ ಮಾಡಿ ಬೋಗಸ್ ಬಿಲ್‌ಗಳನ್ನು ತಯಾರಿಸುತ್ತಿದ್ದರು ಎಂಬುದು ಬೆಳಕಿಗೆ ಬಂದಿದೆ. ಈ ಮೂಲಕ ಸುಮಾರು 34,490.699 ಮೆಟ್ರಿಕ್ ಟನ್ ಕಬ್ಬಿನ ತೂಕವನ್ನು ಕೃತಕವಾಗಿ ದಾಖಲಿಸಿ ರೂ.12,33,22,793 ಹಣವನ್ನು 91 ವಿವಿಧ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆ ಮಾಡಿ ದುರುಪಯೋಗ ಮಾಡಿಕೊಂಡಿರುವುದು ತನಿಖೆಯಲ್ಲಿ ದೃಢಪಟ್ಟಿದೆ.

ಪೊಲೀಸರ ಪ್ರಕಾರ, ಈ ಆರೋಪಿಗಳು ಈ ಹಿಂದೆ ಬೆಳಗಾವಿ ಹಾಗೂ ಬಾಗಲಕೋಟೆ ಜಿಲ್ಲೆಗಳ ವಿವಿಧ ಸಕ್ಕರೆ ಕಾರ್ಖಾನೆಗಳಲ್ಲಿಯೂ ಇದೇ ರೀತಿಯ ವಂಚನೆ ನಡೆಸಿದ್ದ ಹಿನ್ನೆಲೆ ಹೊಂದಿದ್ದಾರೆ ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ವಿವರಿಸಿದರು.

### ತನಿಖಾ ತಂಡಕ್ಕೆ ಎಸ್ಪಿ ಪ್ರಶಂಸೆ

ಹೆಚ್ಚುವರಿ ಪೊಲೀಸ್ ಅಧೀಕ್ಷಕ ರಾಮನಗೌಡ ಹಟ್ಟಿ ಹಾಗೂ ಗ್ರಾಮೀಣ ಡಿವೈಎಸ್ಪಿ ಟಿ.ಎಸ್. ಸುಲ್ಫ್ ಅವರ ಮೇಲ್ವಿಚಾರಣೆಯಲ್ಲಿ, ಸಿಪಿಐ ರಮೇಶ ಅವಜಿ ನೇತೃತ್ವದ ವಿಶೇಷ ತನಿಖಾ ತಂಡ ಪ್ರಕರಣವನ್ನು ಅಲ್ಪಾವಧಿಯಲ್ಲಿ ಭೇದಿಸಿ ಆರೋಪಿಗಳನ್ನು ಪತ್ತೆಹಚ್ಚಿದೆ. ಅತ್ಯುತ್ತಮ ತನಿಖೆ ನಡೆಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಎಸ್ಪಿ ಲಕ್ಷ್ಮಣ ನಿಂಬರಗಿ ಅವರು ಪ್ರಶಂಸನಾ ಪತ್ರ ನೀಡಿ ಗೌರವಿಸಿದರು.

### ವಶಪಡಿಸಿಕೊಂಡ ಹಣ



ತನಿಖೆ ವೇಳೆ ಪ್ರಮುಖ ಆರೋಪಿ ಧರಪ್ಪ ನಾವಿಯಿಂದ ರೂ.21 ಲಕ್ಷ ನಗದು, ಬ್ಯಾಂಕ್ ಖಾತೆಯಲ್ಲಿದ್ದ ರೂ.4,80,47,981, ಇತರ ಖಾತೆಗಳಿಂದ ರೂ.5,48,52,102, ಹೀಗೆ ಒಟ್ಟು ರೂ.10,50,00,083 ವಶಪಡಿಸಿಕೊಳ್ಳಲಾಗಿದೆ.

ಇದಲ್ಲದೆ ಬ್ಯಾಂಕ್ ಖಾತೆಗಳಲ್ಲಿ ರೂ.82,07,569 ಮೊತ್ತವನ್ನು ಫ್ರೀಜ್ ಮಾಡಲಾಗಿದ್ದು, ಒಟ್ಟಾರೆ ರೂ.11,32,07,569 ಹಣವನ್ನು ವಶಕ್ಕೆ ಪಡೆಯಲಾಗಿದೆ ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ತಿಳಿಸಿದರು.

### 8 ಆರೋಪಿಗಳ ಬಂಧನ

ಪ್ರಮುಖ ಆರೋಪಿ ಧರೆಪ್ಪ ದುಂಡಪ್ಪ ನಾವಿ ಸೇರಿದಂತೆ ಒಟ್ಟು ಎಂಟು ಆರೋಪಿಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಪ್ರಕರಣದ ಇತರ ಆರೋಪಿತರ ಕುರಿತು ತನಿಖೆ ಮುಂದುವರಿದಿದೆ ಎಂದು ಎಸ್ಪಿ ಲಕ್ಷ್ಮಣ ನಿಂಬರಗಿ ವಿವರಿಸಿದರು.

## ಸರ್ಕಾರ ಕೂಡಲೇ ಶಿಕ್ಷಣ ಕ್ಷೇತ್ರದ ಸಮಸ್ಯೆಗಳತ್ತ ಗಮನಹರಿಸಲಿ

■ ಉದಯರಶ್ಮಿ ದಿನಪತ್ರಿಕೆ



### ಪಪೂ ಉಪನ್ಯಾಸಕರ ನ್ಯಾಯಯುತ ಬೇಡಿಕೆಗಳಿಗೆ ಸಂಪೂರ್ಣ ಬೆಂಬಲ ವ್ಯಕ್ತ । ಮಾಜಿ ಎಂಎಲ್ಸಿ ಅರುಣ ಶಹಾಪೂರ ಆಗ್ರಹ

ಸಿಂದಗಿ: ರಾಜ್ಯದಲ್ಲಿ ಶಿಕ್ಷಣ ಕ್ಷೇತ್ರ ಅನೇಕ ಸಮಸ್ಯೆಗಳಿಂದ ಬಳಲುತ್ತಿದೆ. ಖಾಲಿ ಇರುವ ವಿಷಯ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡದೆ, ಅತಿಥಿ ಶಿಕ್ಷಕರ ಮೇಲೆಯೇ ಶಿಕ್ಷಣ ವ್ಯವಸ್ಥೆಯನ್ನು ನಡೆಸುತ್ತಿರುವುದು ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಆತಂಕಕಾರಿ ಬೆಳವಣಿಗೆಯಾಗಿದೆ. ಜೊತೆಗೆ ಇದೀಗ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರನ್ನು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಬೋಧನೆಗೆ ನಿಯೋಜಿಸುವ ಕ್ರಮವೂ ವ್ಯಾಪಕ ವಿರೋಧಕ್ಕೆ ಕಾರಣವಾಗಿದೆ ಎಂದು ಮಾಜಿ ವಿಪ ಸದಸ್ಯ ಅರುಣ ಶಹಾಪೂರ ಹರಿಹಾಯ್ದರು.

ಸಿಂದಗಿ ನಗರದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ನಿರ್ಧಾರವನ್ನು ಮರುಪರಿಶೀಲಿಸಿ, ಅವರೊಂದಿಗೆ ಚರ್ಚಿಸಿ ನಿರ್ಣಯ ಕೈಗೊಳ್ಳಬೇಕಾಗಿದೆ. ರಾಜ್ಯ ಸರ್ಕಾರವು ಸಂಪೂರ್ಣ ಸಚಿವ ಸಂಪುಟವನ್ನು ರಚಿಸಿ, ಶಿಕ್ಷಣ ಇಲಾಖೆಗೆ ಪೂರ್ಣಾವಧಿಯ ಸಚಿವರನ್ನು ನೇಮಿಸಬೇಕು. ಶಿಕ್ಷಣದಂತಹ ಮಹತ್ವದ ಇಲಾಖೆಗೆ ಇನ್ನೂ ಸಚಿವರ ನೇಮಕವಾಗದೇ ಇರುವುದು ಅತ್ಯಂತ ದುರದೃಷ್ಟಕರ ಸಂಗತಿ. ಈ ವಿಷಯದಲ್ಲಿ ಹೋರಾಟ ನಡೆಸುತ್ತಿರುವವರ ನ್ಯಾಯಯುತ ಬೇಡಿಕೆಗಳಿಗೆ ನನ್ನ ಸಂಪೂರ್ಣ ಬೆಂಬಲವಿದೆ. ಸರ್ಕಾರ ಕೂಡಲೇ ಶಿಕ್ಷಣ ಕ್ಷೇತ್ರದ ಸಮಸ್ಯೆಗಳತ್ತ ಗಮನಹರಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕು.

ಕೇಂದ್ರ ಸರ್ಕಾರವು ಲೋಕಸಭಾ ಕ್ಷೇತ್ರಗಳ ಪುನರ್‌ವಿಂಗಡಣೆ ಹಾಗೂ ಮಹಿಳಾ ಮೀಸಲಾತಿ ಅನುಷ್ಠಾನದ ಕುರಿತು ಸಿದ್ಧತೆ ನಡೆಸುತ್ತಿದೆ ಎಂಬ ವರದಿಗಳು ಮಾಧ್ಯಮಗಳಲ್ಲಿ ಕಾಲಕಾಲಕ್ಕೆ ಪ್ರಕಟವಾಗುತ್ತಿವೆ. ಈ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯ ಜನಪ್ರತಿನಿಧಿಗಳು, ಸಂಘ–ಸಂಸ್ಥೆಗಳ ಮುಖಂಡರು ಹಾಗೂ ಸಾರ್ವಜನಿಕರು ಒಗ್ಗೂಡಿ ನಮ್ಮ ಜಿಲ್ಲೆಯ ಹಿತಾಸಕ್ತಿಗಾಗಿ ಧ್ವನಿ ಎತ್ತುವ ಅಗತ್ಯವಿದೆ. ಪುನರ್‌ವಿಂಗಡಣೆ ಸಂದರ್ಭದಲ್ಲಿ ವಿಜಯಪುರ ಜಿಲ್ಲೆಗೆ ಎರಡು ಲೋಕಸಭಾ ಕ್ಷೇತ್ರಗಳನ್ನು ಮಂಜೂರು ಮಾಡಬೇಕೆಂದು ನಮ್ಮ ಜಿಲ್ಲೆಯ ಜನತೆಯ ಆಗ್ರಹ. ಎರಡು ಕ್ಷೇತ್ರಗಳಾಗಿ ಪುನರ್‌ವಿಂಗಡಣೆಯಾದಲ್ಲಿ ಒಂದನ್ನು ಸಿಂದಗಿ ಲೋಕಸಭಾ ಕ್ಷೇತ್ರವಾಗಿ ಘೋಷಿಸಬೇಕು ಎಂದು ಆಗ್ರಹಿಸುವ ದಿಸೆಯಲ್ಲಿ ಸ್ಥಳೀಯ ಶಾಸಕರು, ಎಲ್ಲಾ ಜನಪ್ರತಿನಿಧಿಗಳು ಹಾಗೂ ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಒಗ್ಗೂಡಿ ಜಿಲ್ಲೆಯ ಸಂಸದರನ್ನು ಭೇಟಿ ಮಾಡಿ ಕೇಂದ್ರ ಸರ್ಕಾರದ ಮುಂದೆ ಈ ಬೇಡಿಕೆಯನ್ನು ಬಲವಾಗಿ ಮಂಡಿಸಬೇಕು ಎಂದು ಆಗ್ರಹಿಸೋಣ ಎಂದರು.

ರಾಜ್ಯದಲ್ಲಿ ಜಿಲ್ಲೆಗಳ ಪುನರ್‌ವಿಂಗಡಣೆ ಮಾಡುವ ಇಚ್ಛಾಶಕ್ತಿ ಆಗಿನ ಮತ್ತು ಈಗಿನ ಸರ್ಕಾರಕ್ಕೆ ಇಲ್ಲ. ಒಂದು ವೇಳೆ ಭವಿಷ್ಯದಲ್ಲಿ ಪುನರ್‌ವಿಂಗಡಣೆ ಮಾಡುವ ಇಚ್ಛಾಶಕ್ತಿ ಉಂಟಾದರೆ ಸಿಂದಗಿಯನ್ನೇ ಪ್ರತ್ಯೇಕ ಜಿಲ್ಲೆಯಾಗಿ ಘೋಷಿಸಬೇಕು ಎಂಬುದು ಈ ಭಾಗದ ಜನರ ಬಹುಕಾಲದ ನ್ಯಾಯಸಮ್ಮತ ಬೇಡಿಕೆಯಾಗಿದೆ. ಆಡಳಿತಾತ್ಮಕ ಅನುಕೂಲತೆ, ಸಮಗ್ರ ಅಭಿವೃದ್ಧಿ ಹಾಗೂ ಜನಸೇವೆಯ ದೃಷ್ಟಿಯಿಂದ ಸಿಂದಗಿಗೆ ಜಿಲ್ಲೆಯ ಸ್ಥಾನಮಾನ ನೀಡುವುದು ಅತ್ಯಗತ್ಯವಾಗಿದೆ. ಭವಿಷ್ಯದಲ್ಲಿ ಜಿಲ್ಲೆ ಸ್ಥಾನಮಾನ ನೀಡಬೇಕು. ಇದು ಕೇವಲ ಒಂದು ಪ್ರದೇಶದ ಬೇಡಿಕೆಯಲ್ಲ. ಉತ್ತರ ಕರ್ನಾಟಕದ ಸಮತೋಲನ ಅಭಿವೃದ್ಧಿಗೆ ಪೂರಕವಾದ ಜನರ ಹಕ್ಕೊತ್ತಾಯವಾಗಿದೆ ಎಂದು ಆಗ್ರಹಿಸಿದ್ದಾರೆ.

ಈ ವೇಳೆ ಸಾಯಬಣ್ಣ ದೇವರಮನಿ, ಸಿದ್ರಾಮ ಆನಗೊಂಡ, ಶಿವಾನಂದ ರೋಡಗಿ ಸೇರಿದಂತೆ ಇತರರು ಇದ್ದರು.

## ವಿಚಾರಗಳು ಜಗತ್ತನ್ನು ಆಳುತ್ತವೆ: ಚನ್ನಶೆಟ್ಟಿ

ಬೀದರ್,ಜೂ.30–ವಿಶ್ವ ಶಾಂತಿ ನೀಡಿದ ಗೌತಮ ಬುದ್ಧ, ಭಕ್ತಿಭಂಡಾರಿ ಅಣ್ಣ ಬಸವಣ್ಣ ಮತ್ತು ವಿಶ್ವ ಜ್ಞಾನಿ ಡಾ.ಅಂಬೇಡ್ಕರ್ ಅವರ ವಿಚಾರಗಳು ಎಂದಿಗಿಂತಲೂ ಇಂದು ಹೆಚ್ಚು ಅವಶ್ಯಕವಾಗಿವೆ. ವಿಚಾರಗಳು ಜಗತ್ತನ್ನು ಆಳುತ್ತವೆ ಎಂದು ಬೀದರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸುರೇಶ ಚನಶೆಟ್ಟಿ ಹೇಳಿದರು.

ಬುದ್ಧ ಬಸವ ಅಂಬೇಡ್ಕರ ವಿಚಾರಧಾರೆ, ಬುದ್ಧಿಷ್ಟ ಮಕ್ಕಳ ಹೆಸರಿನ ಲೋಕ, ಡಾ.ಅಂಬೇಡ್ಕರ್ ಮಹಾ ಪರಿನಿರ್ವಾಣ ಗ್ರಂಥಗಳನ್ನು ಸಮರ್ಪಿಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಇಂದಿನ ಸಮಾಜಕ್ಕೆ ಈ ಮೌಲಿಕ ಕೃತಿಗಳು ದಿವ್ಯ ಔಷಧಿಯಾಗಿವೆ. ಇವುಗಳು ಶಾಲಾ ಕಾಲೇಜು ಮಕ್ಕಳಿಗೆ ಬಹು ಉಪಯುಕ್ತ ಗ್ರಂಥಗಳಾಗಿವೆಂದರು. ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ಸಂಚಾಲಕರಾದ ಮಾರುತಿ ಬೌದ್ಧೆ ಅವರು ಅಧ್ಯಕ್ಷತೆ ವಹಿಸಿ, ಇಂದಿನ ಯುವ ಜನಾಂಗವೂ ಇಂತಹ ಮಾನವೀಯ ಮೌಲಿಕ ಪುಸ್ತಕವನ್ನು ಅಧ್ಯಯನ, ಅಧ್ಯಾಪನ ಮಾಡುವ ಮೂಲಕ ಈ ತ್ರಿಮೂರ್ತಿಗಳು ನಡೆದ ದಾರಿ, ಡಾ.ಅಂಬೇಡ್ಕರ್ ರವರ ಕನಸಾದ ಭಾರತ ಬೌದ್ಧ ಮಯ ಮಾಡುವ ಉದ್ದೇಶಕ್ಕೆ ಪೂರಕವಾದ ಮಹಾನ ಗ್ರಂಥವಾಗಿದೆ ಎಂದರು.

## ಶಾಸಕ ಕಟಕಧೋಂಡ ಗೆ ಸಚಿವ ಸ್ಥಾನ ನೀಡಲು ಆಗ್ರಹ

### ದಲಿತ ಹೋರಾಟಗಾರ ಹಾಗೂ ಆರ್‌ಪಿಐ ಪಕ್ಷದ ಮುಖಂಡ ಜಿತೇಂದ್ರ ಕಾಂಬಳೆ ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯ ನಾಗಠಾಣ ಶಾಸಕ ವಿಠ್ಠಲ ಕಟಕಧೋಂಡ ಅವರಿಗೆ ಸಚಿವ ಸ್ಥಾನ ನೀಡಬೇಕು, ಕಟಕಧೋಂಡ ಮೂಲತ: ಇಂಡಿ ತಾಲೂಕಿನವರಾಗಿದ್ದು ಕಟಕಧೋಂಡ ಅವರಿಗೆ ಸಚಿವ ಸ್ಥಾನ ನೀಡಿದರೆ ದಲಿತ ಬಾಂಧವರಿಗೆ ನ್ಯಾಯ ದೊರಕುತ್ತದೆ ಹಾಗೂ ಇಂಡಿ ಮತಕ್ಷೇತ್ರಕ್ಕೆ ಸಚಿವ ಸ್ಥಾನದ ಬರ ಕಳಚುತ್ತದೆ ಎಂದು ದಲಿತ ಹೋರಾಟಗಾರ ಹಾಗೂ ಆರ್‌ಪಿಐ ಪಕ್ಷದ ಮುಖಂಡ ಜಿತೇಂದ್ರ ಕಾಂಬಳೆ ಒತ್ತಾಯಿಸಿದರು.


ವ ' ಂ ಗ ' ಳ ' ವ ಾ ರ ' ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡೋಹರ ಕಕ್ಕಯ್ಯ ಸಮುದಾಯಕ್ಕೆ ಸೇರಿದ ವಿಠ್ಠಲ ಕಟಕಧೋಂಡ ಸಾತ್ವಿಕ ಹಾಗೂ ಸರಳ ರಾಜಕಾರಣಿ, ಅನೇಕ ವರ್ಷಗಳಿಂದ ರಾಜಕೀಯದಲ್ಲಿರುವ ಅನುಭವಿ ರಾಜಕಾರಣಿ, ಎಲ್ಲ ಸಮುದಾಯಗಳನ್ನು ಪ್ರೀತಿ, ವಿಶ್ವಾಸದಿಂದ ಕಾಣುವ ವ್ಯಕ್ತಿ, ಹೀಗಾಗಿ ಅವರಿಗೆ ಸಚಿವ ಸ್ಥಾನ ನೀಡುವುದು ಅಗತ್ಯವಾಗಿದೆ, ಆ ಮೂಲಕ ಈ ದಲಿತ ಸಮುದಾಯಕ್ಕೆ ನ್ಯಾಯ ಒದಗಿಸಲು ಸಾಧ್ಯ, ಇಂದಿಗೂ ಪರಿಶಿಷ್ಟ ಜಾತಿಯ ಸಮುದಾಯಗಳಿಗೆ ಕಾಂಗ್ರೆಸ್‌ನಿಂದ ನ್ಯಾಯ ದೊರಕಿಲ್ಲ, ಈ ಸಮುದಾಯದ ಶಾಸಕರು ಸಹ ವಿಜಯಪುರ ಜಿಲ್ಲೆಯಲ್ಲಿ ಇಲ್ಲ, ಹೀಗಾಗಿ ಕಟಕಧೋಂಡರಿಗೆ ಸಚಿವ ಸ್ಥಾನ ನೀಡಬೇಕು ಎಂದರು.

ಇಂಡಿ ಇಲ್ಲಿಯವರೆಗೂ ಸಚಿವ ಸ್ಥಾನವನ್ನೇ ಕಂಡಿಲ್ಲ, ಕಟಕಧೋಂಡ ಅವರು ಮೂಲತಃ ಇಂಡಿ ತಾಲೂಕಿನವರು. ಹೀಗಾಗಿ ಕಟಕಧೋಂಡ ಅವರಿಗೆ ಸಚಿವ ಸ್ಥಾನ ನೀಡಿದರೆ ಈ ಎರಡು ವಿಷಯಗಳಿಗೂ ಆದ್ಯತೆ ದೊರಕಿ ಇಂಡಿಯ ಸಚಿವ ಸ್ಥಾನದ ಬರ ನೀಗಲಿದೆ ಎಂದರು.

ಇನ್ನೊಂದು ಸಚಿವ ಸ್ಥಾನ ಕೊಡಿಸುವುದಾಗಿ ಸಚಿವ ಡಾ.ಎಂ.ಬಿ. ಪಾಟೀಲರು ತಾವು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸುವ ದಿನವೇ ಘೋಷಣೆ ಮಾಡಿದ್ದಾರೆ, ಈ ಹಿನ್ನೆಲೆಯಲ್ಲಿ ಸಾಮಾಜಿಕ ನ್ಯಾಯದ ಸೂತ್ರದ ಅಡಿಯಲ್ಲಿ ಕಟಕಧೋಂಡರಿಗೆ ಸಚಿವ ಸ್ಥಾನಕೊಡಿಸಲು ಸಚಿವ ಎಂ.ಬಿ.ಪಾಟೀಲರು ಪ್ರಯತ್ನಿಸಬೇಕು ಎಂದರು. ಸಿದ್ರಾಮಪ್ಪ ಕಪಾಲಿ, ದತ್ತಾತ್ರೇಯ ಛತ್ರಿ ಪತ್ರಿಕಾಗೋಷ್ಠಿಯಲ್ಲಿ ಪಾಲ್ಗೊಂಡಿದ್ದರು.

## ಹೆಣ್ಣುಮಕ್ಕಳಿಗೆ ತೊಂದರೆ ನೀಡುವ ಪುಂಡರ ಮೇಲೆ ಕ್ರಮಕ್ಕೆ ಮನವಿ

■ ಉದಯರಶ್ಮಿ ದಿನಪತ್ರಿಕೆ




### ಶಾಲೆಯ ಸುತ್ತಮುತ್ತ ಗುಟ್ಕಾ ತಂಬಾಕು ಸಿಗರೇಟ್ ಮಾರಾಟ ಮಾಡುವ ಅಂಗಡಿ ಸಂಪೂರ್ಣ ಬಂದ್ ಮಾಡಲು ಸಾರ್ವಜನಿಕರ ಆಗ್ರಹ

ಕೊಲ್ಹಾರ: ಶಾಲಾ ಕಾಲೇಜುಗಳ ಮುಂದೆ ಗುಟ್ಕಾ ಸಿಗರೇಟ್ ಬಿಡಿ ಹಾಗೂ ಇತರೆ ಕಾನೂನು ಬಾಹಿರ ಚಟುವಟಿಕೆಗಳು ನಡೆಯುತ್ತಿದ್ದು ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪಟ್ಟಣದ ವಾರ್ಡ್ ಸಂಖ್ಯೆ 4ರಲ್ಲಿ ಬರುವ ಸರ್ಕಾರಿ ಪ್ರೌಢಶಾಲೆ, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಯ ಶಾಲಾ ಕಾಲೇಜುಗಳು ಮುಂದೆ ಕಾನೂನುಬಾಹಿರ ಚಟುವಟಿಕೆಗಳು ನಡೆಯುತ್ತಿದ್ದು ಕೂಡಲೇ ತಡೆಗಟ್ಟಲು ಆಗ್ರಹಿಸಿ ಸೋಮವಾರ ಸಾರ್ವಜನಿಕರು ತಹಸಿಲ್ದಾರ್, ಪೊಲೀಸ್ ಠಾಣೆ ಮತ್ತು ಪಟ್ಟಣ ಪಂಚಾಯಿತಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ಮಾಜಿ ಅಧ್ಯಕ್ಷ ವಿರುಪಾಕ್ಷಿ ಕೋಲಕಾರ ಹಾಗೂ ಪಟ್ಟಣ ಪಂಚಾಯತ್ ಸದಸ್ಯ ಬಾಬು ಭಜಂತ್ರಿ ಮಾತನಾಡಿ, ಶಾಲಾ ಕಾಲೇಜುಗಳಿಂದ ಸುಮಾರು 200 ಮೀಟರ್ ಅಂತರದಲ್ಲಿ ಗುಟ್ಕಾ ಸಿಗರೇಟ್ ನಂತಹ ಅಂಗಡಿಗಳು ದೂರವಿರಬೇಕು ಎಂಬ ಆದೇಶವಿದ್ದರೂ ಕೂಡ ಈ ಶಾಲಾ ಕಾಲೇಜುಗಳ ಆವರಣದ ಮುಂದೆ ಗುಟ್ಕಾ, ಸಿಗರೇಟ್ ಹಾಗೂ ಅತಿಯಾದ ಕೆಫೇನ್ ಇರುವ ಸ್ಟಿಂಗ್, ಅಗ್ನಿ, ಇನ್ನಿತರ ಮಾದಕ ವಸ್ತುಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡುತ್ತಿದ್ದು ಜೊತೆಗೆ ತಮ್ಮ ಅಂಗಡಿಗಳಲ್ಲಿ ಯುವಕರು ಕುಳಿತುಕೊಂಡು ಧೂಮಪಾನ ಸೇವನೆ ಸೇರಿದಂತೆ ಇತರೆ ಕಾನೂನುಬಾಹಿರ ಚಟುವಟಿಕೆಗಳನ್ನು ನಡೆಸುತ್ತಿದ್ದಾರೆ.

ಅದು ಅಲ್ಲದೆ ಈ ಶಾಲಾ–ಕಾಲೇಜುಗಳ ಮುಂದಿನ ಮುಖ್ಯರಸ್ತೆಯಲ್ಲಿ ಶಿವಾಜಿ ಸರ್ಕಲ್ ಸಂತ ಸೇವಾಲಾಲ್ ಸರ್ಕಲ್ ಬಸ್ ನಿಲ್ದಾಣ ಇತರಡೆಗೆ ದ್ವಿಚಕ್ರ ವಾಹನದಲ್ಲಿ ಕಾನೂನುಬಾಹಿರವಾಗಿ ಮೂರು, ನಾಲ್ಕು, ಐದು ಜನರು ಯುವಕರು ಕುಳಿತುಕೊಂಡು ಸಂಚರಿಸುತ್ತಾ ಈ ರಸ್ತೆಯಲ್ಲಿ ನಡೆದುಕೊಂಡು ಹೋಗುವ ಹೆಣ್ಣು ಮಕ್ಕಳಿಗೆ ತೊಂದರೆ ಕೊಡುತ್ತಿದ್ದು ಅವರನ್ನು ಚುಡಾಯಿಸುವುದೂ ಸಾರ್ವಜನಿಕರಿಗೆ ಕಂಡುಬಂದಿದ್ದು ಕೂಡಲೇ ತಾವುಗಳು ಇದರ ಕುರಿತು ಸೂಕ್ತ ಕಾನೂನು ಕ್ರಮ ತೆಗೆದುಕೊಂಡು ಇಲ್ಲಿ ಸುತ್ತಾಡುವ ಹಾಗೂ ಧೂಮಪಾನ ಮದ್ಯಪಾನ ಮಾಡುವ ಪುಂಡಪೋಕರಿಗಳಿಗೆ ಕ್ರಮ ಕೈಗೊಳ್ಳಬೇಕು ಹಾಗೂ ಈಗಾಗಲೇ ನಾವು ಪೊಲೀಸ್ ಠಾಣೆಯಲ್ಲಿ ನಡೆಯುವ ಸಭೆಗಳಲ್ಲಿ ಈ ಕುರಿತು ಪೊಲೀಸ್ ಅಧಿಕಾರಿಗಳಿಗೆ ಮೌಖಿಕವಾಗಿ ತಿಳಿಸಿದರು ಕೂಡ ಕ್ರಮ ಕೈಗೊಂಡಿಲ್ಲ ಕೂಡಲೇ ಇದರ ಕುರಿತು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಮಣ್ಣ ಉಪ್ಪಲದಿನ್ನಿ, ರಾಜು ತುಂಬರಮಟ್ಟಿ, ವೀರಭದ್ರಪ್ಪ ಬಾಗಿ, ರಮೇಶ್ ಕಾಕಂಡಕಿ, ರಾಕೇಶ್ ಕೆಳಗಿನಮನಿ, ಸುನಿಲ್ ನಂದಿ ಸೇರಿದಂತೆ ಇತರರು ಇದ್ದರು.

# ಕಲೆಯನ್ನೇ ನಂಬಿ ಬದುಕುವಂತ ಕಲಾವಿದರ ಬದುಕು ಬಹಳ ಕಷ್ಟಕರ

ಯಾದಗಿರಿ : ನಗರದ ಶ್ರೀರಾಮಕೃಷ್ಣ ಸ್ವಾಮಿ ವಿವೇಕಾನಂದ ಆಶ್ರಮದಲ್ಲಿ ಅಬ್ಬೆತುಮಕೂರಿನ ಶ್ರೀ ವಿಶ್ವಜ್ಯೋತಿ ಪುಟ್ಟರಾಜ ಕಲಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಸುಗಮ ಸಂಗೀತ ಸಂಭ್ರಮೋತ್ಸವ ಸಾಂಸ್ಕೃತಿಕ ಕಾರ್ಯಕ್ರಮವನ್ನು ಬಿಜೆಪಿಯ ಹಿರಿಯ ಮುಖಂಡರಾದ ಸನ್ಮಾನ್ಯ ಶ್ರೀ ರಾಚನಗೌಡ ಮುದ್ನಾಳ ಅವರು ಸಸಿಗೆ ನೀರು ಹಾಕುವುದರ ಮೂಲಕ ಉದ್ಘಾಟಿಸಿದರು

ನಮ್ಮ ನಾಡಿನಲ್ಲಿ ಕಲೆ ಸಾಹಿತ್ಯ ಜೀವಂತವಾಗಿರಬೇಕಾದರೆ ಕಲಾವಿದರ ಶ್ರಮ ಮತ್ತು ಅವರ ಪ್ರಯತ್ನ ಬಹಳ ದೊಡ್ಡದು ಅಂದಮೇಲೆ ಕಲಾವಿದರಿಗೆ ಸಾಕಷ್ಟು ಸೌಕರ್ಯವನ್ನು ಕೊಡುವಂತಹ ಕೆಲಸ ಸರಕಾರ ಮಾಡಬೇಕಾಗಿದೆ ಆದರೆ ಇವತ್ತು ಕಲಾವಿದರಿಗೆ ನೆರವು ನೀಡುವುದರಲ್ಲಿ ಕಲೆಗೆ ಪ್ರೊತ್ಸಾಹ ಕೊಡುವುದರಲ್ಲಿ ಸರಕಾರ ವಿಫಲವಾಗಿದೆ ಕಲೆಯನ್ನೇ ನಂಬಿ ಬದುಕುವಂತ ಕಲಾವಿದರ ಬದುಕು ಬಹಳ ಕಷ್ಟಕರ ಹಾಗಾಗಿ ಮುಂದಿನ ದಿನಮಾನಗಳಲ್ಲಿ ಒಳ್ಳೆಯ ನೆರವು ಮತ್ತು ಸೌಲಭ್ಯ ಹೆಚ್ಚಿನ ಅನುದಾನ ನೀಡಲಿ ಎಂದು ಸರಕಾರಕ್ಕೆ ಒತ್ತಾಯಿಸಿದರು. ಪ್ರಶಸ್ತಿಯನ್ನು ಸ್ವೀಕರಿಸಿದ ಲಯನ್ಸ್ ಕ್ಲಬ್ ಅಧ್ಯಕ್ಷರಾದ ಡಾ. ಸಿದ್ದರಾಜ ರೆಡ್ಡಿ ಅವರು ಇಂತಹ ಸಂಸ್ಕೃತಿಕ ಕಾರ್ಯಕ್ರಮವನ್ನು ಮಾಡಬೇಕಾದರೆ ಕಲಾವಿದರು ಎಷ್ಟು ಕಷ್ಟ ಅನುಭವಿಸುತ್ತಾರೆ ಅನ್ನೋದು ನನಗೆ ಗೊತ್ತಿದೆ ಯಾಕಂದ್ರೆ ನಾನು ಕೂಡ ಅನೇಕ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ನೋಡಿರುವಂತಹ ಭಾಗಿಯಾಗಿ ನೋಡಿರುವಂತಹದು ಕೇಳಿರುವಂತಹದು ಈ ವರ್ಷ ಇಲಾಖೆಯವರು ಸ್ವಲ್ಪ ಪ್ರಮಾಣದಲ್ಲಿ ಸಂಘ ಸಂಸ್ಥೆಗಳಿಗೆ ಅನುದಾನವನ್ನು ನೀಡಿದ್ದಾರೆ ಒಂದು ಕಾರ್ಯಕ್ರಮ ಮಾಡಬೇಕಾದರೆ ಸಾಕಷ್ಟು ಹಣ ಇದ್ದಾಗ ಮಾತ್ರ ಸಾಧ್ಯವಾಗುತ್ತದೆ ಇಲ್ಲದಿದ್ದರೆ ಕಲಾವಿದರು ಕಷ್ಟ ಪಡಬೇಕಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ವೀರಭಾರತಿ ಪ್ರತಿಷ್ಠಾನದ ಅಧ್ಯಕ್ಷರಾದ ವ?ಜನಾಥ ಹಿರೇಮಠರವರು ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಮ್ಮನಾಡಿನಲ್ಲಿ ನಡೆಯುತ್ತಿರಬೇಕು ಸಂಗೀತ ಪ್ರತಿಯೊಬ್ಬರು ಕೇಳಿದಾಗ ಮನಸ್ಸಿಗೆ ನೆಮ್ಮದಿ ಸಿಗುತ್ತದೆ ಸಂಗೀತ ಅನೇಕ ರೋಗಗಳಿಗೆ ದಿವ್ಯ ಔಷಧವಾಗಿದೆ ಎಂದರು. ಆಶ್ರಮದ ಸಂಚಾಲಕರಾದ ಪಿ. ವೇಣುಗೋಪಾಲ್ ಆಧ್ಯಾತ್ಮಿಕವಾಗಿ ಭಗವಂತನ ಸತ್ಯ ಸಂಕಲ್ಪದಿಂದ ಏನು ನಡೆಯಬೇಕು ಅದು ಸತ್ಯ ಶುದ್ಧವಾಗಿ ನಡೆಯುತ್ತದೆ ನಡೆಯಲೇಬೇಕು ಹಾಗಾಗಿ ಎಲ್ಲವೂ ಭಗವಂತನ ಸೃಷ್ಟಿಯಲ್ಲಿ ನಾವೆಲ್ಲ



ಬದುಕಬೇಕಾಗಿದೆ ರಾಮಕೃಷ್ಣ ಪರಮಹಂಸರ ಕೃಪೆ ಎಲ್ಲರಿಗಿರಲಿ ಎಂದು ಮಾತನಾಡಿದರು

ಅತಿಥಿಗಳಾಗಿ ಡಾಕ್ಟರ್ ಪ್ರದೀಪ್ ರೆಡ್ಡಿ ಖ್ಯಾತ ನೇತ್ರ ತಜ್ಞರು ಮೀನಾಕ್ಷಿ ನೇತ್ರಾಲಯ ಯಾದಗಿರಿ ಜಿಲ್ಲೆಯ ಕಲಾವಿದರಾದ ಶರಣು ನಾಟಿಕಾರ್ ಭಾಗವಹಿಸಿದರು.ಪ್ರಶಸ್ತಿ ಪ್ರಧಾನ: ಶಿಕ್ಷಣ ಕ್ಷೇತ್ರದಲ್ಲಿ ಶ್ರೀ ಶಂಕರ ಸೋನಾರ ದೈಹಿಕ ಶಿಕ್ಷಣಾಧಿಕಾರಿಗಳು ಶಿಕ್ಷಣ ರತ್ನ ಪ್ರಶಸ್ತಿ ಸಾಮಾಜಿಕ ಕ್ಷೇತ್ರದಲ್ಲಿ ಡಾ. ಸಿದ್ದರಾಜ ರೆಡ್ಡಿ ಅಧ್ಯಕ್ಷರು ಲಯನ್ಸ್ ಕ್ಲಬ್ ಸಂಪಾದಕರು ಗಿರಿದರ್ಶನ ಕನ್ನಡ ದಿನಪತ್ರಿಕೆ ಯಾದಗಿರಿ ಸಮಾಜ ಸೇವಾ ರತ್ನ ಪ್ರಶಸ್ತಿ ಆಧ್ಯಾತ್ಮಿಕ ಕ್ಷೇತ್ರದಲ್ಲಿ ಶ್ರೀ ರಾಮಕೃಷ್ಣ ಸ್ವಾಮಿ ವಿವೇಕಾನಂದ ಆಶ್ರಮದ ಮುಖ್ಯಸ್ಥರಾದ ಶ್ರೀ ಪಿ ವೇಣುಗೋಪಾಲ್ ಅವರಿಗೆ ಆಧ್ಯಾತ್ಮಿಕ ಸೇವಾ ಸಿರಿ ಪ್ರಶಸ್ತಿ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಶ್ರೀಮತಿ ಜ್ಯೋತಿಲತಾ ತಡಿಬಿಡಿಮಠ ಸಮಾಜ ಸೇವಾ ಸಿರಿ ಪ್ರಶಸ್ತಿಯನ್ನು ಸ್ವೀಕರಿಸಿದರು

ಕಲಾವಿದರಾದ ಶ್ರೀ ಮೃತ್ಯುಂಜಯ ಹಿರೇಮಠ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಶ್ರೀ ಅಣ್ಣಾರಾವ ಶೆಳ್ಳಗಿ ಮತ್ತಿಮೂಡ ಸುಗಮ ಸಂಗೀತ ಶ್ರೀ ಪ್ರಶಾಂತ್ ಗೋಲ್ಡ್ ಸ್ಮಿತ್ ಬಾನಸೂರಿ ವಾದನ ಶ್ರೀಮತಿ ಪವಿತ್ರ ವಿಶ್ವನಾಥ್ ರಾಜನಾಳ ತತ್ವಪದ ಗಾಯನ ಶರಣಬಸವ ಹೂಗಾರ್ ಹಾವನೂರ್ ವಚನ ಗಾಯನ ಚೇತನ್ ಎಸ್ ಬೀದಿಮನಿ ಭಕ್ತಿಗೀತೆ ಶ್ರೀ ವೀರಭದ್ರಯ್ಯ ಸ್ಥಾವರಮಠ ಹಾಗೂ ಶಿವಾನಂದ ಬಳ್ಳೂರ್ಗಿ ಹಿತ್ತಲಶಿರೂರ ತಬಲಾ ಸಾತ್ ನೀಡಿದರು. ಸಂಸ್ಥೆಯ ಅಧ್ಯಕ್ಷರಾದ ತೋಟಯ್ಯ ಶಾಸ್ತ್ರಿಗಳು ಅಬ್ಬೆತುಮಕೂರು ಪ್ರಾಸ್ತಾವಿಕ ನುಡಿದರು ಶಿವಲಿಂಗಯ್ಯ ಶಾಸ್ತ್ರಿಗಳು ಗರೂರು ನಿರೂಪಿಸಿದರು



# ಗ್ರಾಪಂ ಸಿಬ್ಬಂದಿಗಳಿಂದ ರಾತ್ರಿ 2 ಗಂಟೆಯಾದರೂ ಪೈಪ್ ಲೈನ್ ದುರಸ್ತಿ : ಕರ್ತವ್ಯ ನಿಷ್ಠೆಗೆ ಶ್ಲಾಘನೆ

ಸೇಡಂ: ಜನರೆಲ್ಲಾ ದಿನದ ಕೆಲಸ ಮುಗಿಸಿ ನೆಮ್ಮದಿಯಿಂದ ನಿದ್ರೆಗೆ ಜಾರುತ್ತಿದ್ದ ಸಮಯ. ಎರಡು ದಿನಗಳಿಂದ ಗ್ರಾಮಸ್ಥರಿಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಿತ್ತು, ಮತ್ತೊಂದು ದಿನ ತೊಂದರೆಯಾಗಬಾರದು ಎಂದು ಪಣತೊಟ್ಟ ಗ್ರಾಮ ಪಂಚಾಯತ್ ಸಿಬ್ಬಂದಿ, ಸಮಯದ ಮಿತಿಯನ್ನು ಬದಿಗಿಟ್ಟು ಮಧ್ಯರಾತ್ರಿಯಿಂದಲೇ ಮೋಟರ್ ದುರಸ್ತಿ ಕಾರ್ಯ ಕೈಗೊಳ್ಳುವ ಮೂಲಕ ಅಪಾರ ಕರ್ತವ್ಯ ನಿಷ್ಠೆ ಮೆರೆದಿದ್ದಾರೆ.ಇಂಥದ್ದೊಂದು ಶ್ಲಾಘನೀಯ ಘಟನೆ ಮಳಖೇಡ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಡೆದಿದೆ. 20 ಎಸ್‌ಪಿ ಮೋಟಾರ್ ಸುಟ್ಟು ಅಂಗವಾಗಿ ಇಡೀ ಗ್ರಾಮಕ್ಕೆ ಎರಡು ಮೂರು ದಿನಗಳಿಂದ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಿತ್ತು. ನಿನ್ನೆ ರಾತ್ರಿ ಹನ್ನೊಂದು ಗಂಟೆಗೆ ಮೋಟಾರ್ ಆಗಮಿಸಿದ್ದರಿಂದ ಗ್ರಾಪಂ ಜಲಗಾರರು ವಾಟಮ್ಯಾನ್ ತಂಡ ತಕ್ಷಣವೇ ಕಾರ್ಯಪ್ರವೃತ್ತರಾಗಿದ್ದಾರೆ. ತಡರಾತ್ರಿ 2 ಗಂಟೆಯಾದರೂ ಮನೆಗೆ ಮರಳದ ಸಿಬ್ಬಂದಿ, ಮೋಟಾರ್ ಅಳವಡಿಸುವ ಮೂಲಕ ಯಶಸ್ವಿಯಾಗಿ ನೀರು ಸರಬರಾಜಿಗೆ ಸಾಕ್ಷಿಯಾಗಿದ್ದಾರೆ.ಗ್ರಾಮ್ ಪಂಚಾಯತ್ ಸದಸ್ಯ ಅಂಬರೀಶ್ ಎಂ ಗುಡಿ ಅವರ ಜೊತೆಗೆ ನಿಂತು ಸಾಥ ನೀಡಿದ್ದು ವಿಶೇಷವಾಗಿತ್ತು.

ಸ್ವಂತ ಹಿತ ಮರೆತು, ನಿದ್ದೆ ಗೆಟ್ಟು ಇಡೀ ಗ್ರಾಮದ ದಾಹ ನೀಗಿಸಲು ಶ್ರಮಿಸಿದ ನಮ್ಮ ಗ್ರಾಪಂ ಸಿಬ್ಬಂದಿಗಳ ಕೆಲಸ ನಿಜಕ್ಕೂ ಎಲ್ಲರಿಗೂ ಮಾದರಿ. ಅಂಬರೀಶ್ ಎಮ್ ಗುಡಿ ಗ್ರಾಪಂ ಸದಸ್ಯರು ಮಳಖೇಡ

# ಬಹಮನಿ ಇತಿಹಾಸ ಸಾರುವ ತಾಜ್ ಸುಲ್ತಾನಪುರನ ಗುಂಬಗಳು

ಕಲಬುರಗಿ : ಬಹಮನಿ ಸಾಮ್ರಾಜ್ಯದ ಕಲೆ, ಸಾಹಿತ್ಯ, ಸಾಂಸ್ಕೃತಿಯ ಇತಿಹಾಸವನ್ನು ಸಾರವು ತಾಜ್ ಸುಲ್ತಾನಪುರನ ಗುಂಬಗಳ ಕೊಡುಗೆ ಅಪಾರವಾಗಿದೆ ಎಂದು ಸಂಶೋಧಕ-ಸಾಹಿತಿ ಮತ್ತು ಕಲಬುರಗಿ ಜಿಲ್ಲಾ 22ನೇ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷ ಮುಡುಬಿ ಗುಂಡೇರಾವ ಅಭಿಮತ ವ್ಯಕ್ತಪಡಿಸಿದರು.

ತಾಲೂಕಿನ ತಾಜ್ ಸುಲ್ತಾನಪುರ ಗ್ರಾಮದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ' ಆಯೋಜಿಸಿದ ಜಿಲ್ಲೆಯ ಐತಿಹಾಸಿಕ ಸ್ಥಳ ಪರಿಚಯಾತ್ಮಕ-53ರಲ್ಲಿ ವಿಶೇಷ ಉಪನ್ಯಾಸ ನೀಡುತ್ತಾ ಅವರು ಮಾತನಾಡುತ್ತಿದ್ದರು.

ಕಲಬುರಗಿ ನೆಲವು ಪ್ರಾಚೀನ ಕಾಲದಲ್ಲಿ ಕಲ್ಲಿನ ನೆಲ 'ಕಲಂಬುರಗಿ', ಬಹಮನಿಯರ ಕಾಲದಲ್ಲಿ 'ಗುಲ್' -ಎಲೆ, 'ಬರ್ಗಾ'- ಹೂವು ಅಂದರೆ, ಎಲೆ-ಹೂವಿನಿಂದ ಕೂಡಿದ ಪ್ರದೇಶವೇ ಗುಲಬರ್ಗಾ ಎಂದು ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿದೆ. ಸುಲ್ತಾನಪುರ ಗ್ರಾಮದ ಇತಿಹಾಸವು ಬಹಳ ರೋಚಕವಾಗಿದೆ. ಹೆಸರೇ ಸೂಚಿಸುವಂತೆ ಸುಲ್ತಾನ-ದೊರೆ, ರಾಜ ಮತ್ತು ರಾಣಿ ವಾಸವಿರುವ ಪುರವೇ ಸುಲ್ತಾನಪುರವಾಗಿದೆ. ನಗರದಲ್ಲಿರುವ ಬಹಮನಿಯರ ಕೋಟೆ, ಜಾಮೀಯಾ ಮಸೀದಿ, ಜಗತ್ತಿನಲ್ಲಿಯೇ ಅತಿ ಉದ್ದವಾದ ತೋಪು, ಜಿಲ್ಲೆಯ ಕೀರ್ತಿ ಹೆಚ್ಚಿಸಿದೆ. ಸಾತ್ ಗುಂಬಜ್, ಚೋರ ಗುಂಬಜ್, ಸರ್ಕಾರಿ ಆಸ್ಪತ್ರೆಯ ಎದುರಿನ ಗುಂಬಗಳು,ಸ್ಮಾರಕಗಳು ಇಂಡೋ-ಸಾರ್ಸನಿಕ ಶೈಲಿಯಿಂದ ಕೂಡಿದೆ. ಇವುಗಳು ಬಹಮನಿ ಕಾಲದ ಇತಿಹಾಸ ಸಾರುತ್ತವೆ. ಶಹಾಬಜಾರ ಎಂಬ ಬಡವಾಣೆಯಲ್ಲಿ ರಾಜನ ಆದೇಶದಂತೆ ಬಜಾರ್(ಮಾರುಕಟ್ಟೆ) ನಡೆಯುತ್ತಿತ್ತು ಎನ್ನುವುದು ದಾಖಲೆಗಳಿಂದ ತಿಳಿದುಬರುತ್ತದೆ. ಶೇಖರೋಜಾದ ಮಿನಾರುಗಳು ಚಾರ್ ಮಿನಾರದಂತೆ ಗೋಚರಿಸುತ್ತದೆ ಎಂದರು. ಬಸವೇಶ್ವರ ಸಮಾಜ ಸೇವಾ ಬಳಗದ ಅಧ್ಯಕ್ಷ ಎಚ್.ಬಿ.ಪಾಟೀಲ್ ಮಾತನಾಡಿ, ಕಳೆದ ಎರಡುವರೆ ವರ್ಷಗಳಿಂದ ಬಳಗದ ವತಿಯಿಂದ ಪ್ರತಿ ಗ್ರಾಮಗಳಿಗೆ ತೆರಳಿ ಜಿಲ್ಲೆಯ ಐತಿಹಾಸಿಕ ಸ್ಥಳಗಳು, ಸ್ಮಾರಕಗಳ ಬಗ್ಗೆ ಪರಿಚಯ ಮತ್ತು ಇತಿಹಾಸ ಜಾಗೃತಿ



ಅಭಿಯಾನವು ನಾಡಿನ ಗಮನ ಸೆಳೆಯುತ್ತಿದೆ. ಇಂದಿನ ಪೀಳಿಗೆಯು ಇತಿಹಾಸವನ್ನು ತಿಳಿದುಕೊಳ್ಳಬೇಕು. ತಾಜ್ ಸುಲ್ತಾನಪುರ ಗ್ರಾಮದಲ್ಲಿ ಗುಂಬಗಳು ಅಳಿವಿನ ಅಂಚಿನಲ್ಲಿವೆ. ಇಂತಹ ಮಹತ್ವದ ಸ್ಮಾರಕಗಳ ರಕ್ಷಣೆಗೆ ಪ್ರತಿಯೊಬ್ಬರೂ ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿಸಮಾಜಸೇವಕಶಿವಯೋಗೆಪ್ಪಾ ಎಸ್.ಬಿರಾದಾರ, ಪುಂಡಲಿಕ್ ಆಜಾದಪುರ, ಸಂತೋಷ ಜಮಾದಾರ, ಹುಸೇನ್ ಮುಜಾವರ್ ಸೇರಿದಂತೆ ಮುಂತಾದವರಿದ್ದರು.

# ರಾಜ್ಯ ಸರ್ಕಾರ ತಂದಿರುವ ಒಳಮೀಸಲಾತಿ ಯಾರಿಗೂ ಸಮಾಧಾನ ತಂದಿಲ್ಲ:ಡಾ.ಜಾಧವ

ಕಲಬುರಗಿ:ಕಾಂಗ್ರೆಸ್ ಸರಕಾರ ಜಾರಿಗೆ ತಂದಿರುವ ಒಳಮೀಸಲಾತಿ ಯಾವ ಸಮುದಾಯಕ್ಕೂ ಸಮಾಧಾನ ತಂದಿಲ್ಲ. ಕೇಂದ್ರ ಸರಕಾರ ಜನಗಣತಿ ನಡೆಸುತ್ತಿದ್ದು, ಸುಪ್ರೀಂಕೋರ್ಟ್ ಪ್ರಕಾರ ಈ ದತ್ತಾಂಶ ಪಡೆದು ಒಳಮೀಸಲು ಜಾರಿಗೆ ತರಬೇಕು ಎಂದು ಮಾಜಿ ಸಂಸದ ಡಾ.ಉಮೇಶ ಜಾಧವ್ ಆಗ್ರಹಿಸಿದರು.

ಮಾತನಾಡಿದರು. ಬಂಜಾರ, ಕೊರಮ, ಕೊರಚ ಹಾಗೂ ಭೋವಿ ಸಮುದಾಯಗಳನ್ನು ಪರಿಶಿಷ್ಟ ಜಾತಿ ಪಟ್ಟಿಯಿಂದ ತೆಗೆಯಬೇಕು ಎಂದು ಕೆಲವರು ಕೋರ್ಟ್ ಮೊರೆ ಹೋಗಿದ್ದರು. ಕೋರ್ಟ್ ಪರಿಶಿಷ್ಟ ಆಯೋಗಕ್ಕೆ ಸೂಚಿಸಿತ್ತು. ಅದರಂತೆ ಆಯೋಗ ಸಹ ರಾಜ್ಯ ಸಕರಾರಕ್ಕೆ ಪತ್ರ ಬರೆದಿತ್ತು. ನಂತರ 2023ರಲ್ಲಿ ಅಂದಿನ ಸರಕಾರದ ಮುಖ್ಯ ಕಾರ್ಯದರ್ಶಿ ಆಯೋಗಕ್ಕೆ ಪತ್ರ ಬರೆದು ಈ ಸಮುದಾಯಗಳು ಇನ್ನೂ ಅಭಿವೃದ್ಧಿಯಾಗಿಲ್ಲ. ಹಿಂದುಳಿದಿದ್ದಾರೆ. ಮೀಸಲಾತಿ ಅಡಿಯಲ್ಲಿ ಬರಬೇಕು ಎಂದು ಬೊಮ್ಮಾಯಿ ಸರಕಾರ ಪತ್ರ ಬರೆದಿತ್ತು ಎಂದರು. ಕೆಲವರು ಇದರ ವಿರುದ್ಧ ಕೋಗೆ ಹೋದರು. ಈ ಪ್ರಕರಣ ನ್ಯಾಯಾಲಯದಲ್ಲಿ ಬಂದಾಗ ರಾಜ್ಯ ಕಾಂಗ್ರೆಸ್ ಸರಕಾರ ಯಾವುದೇ ವಕೀಲರನ್ನು ನೇಮಿಸಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.


ಬಿಜೆಪಿ ಸರಕಾರದಲ್ಲಿ ಮಾಧುಸ್ವಾಮಿ ಕಮಿಟಿ ಒಳ ಮೀಸಲಾತಿ ಜಾರಿ ಮಾಡುವಾಗ ನಾಲ್ಕು ಲಕ್ಷಜನಸಂಖ್ಯೆಗೆ ಒಂದು ಪಾಯಿಂಟ್ ಎಂದು ನಿರ್ಧರಿಸಿದ್ದರು. ನಂತರ ಬಂದ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಸ್ಪೃಶ್ಯ, ಅಸ್ಪೃಶ್ಯ ಎಂದು ಜಗಳ ಹಚ್ಚಲು ಶುರು ಮಾಡಿದರು ಎಂದು ಆರೋಪಿಸಿದರು. ನಾಗಮೋಹನದಾಸ ಬೇಸಿಗೆಯಲ್ಲಿ ಸರ್ವೇ ಹಮ್ಮಿಕೊಂಡರು. ಅವರಿಗೆ ಸರಿಯಾದ ಡಾಟಾ ಸಿಗಲಿಲ್ಲ. ಇವರು ನೀಡಿದ ವರದಿಯನ್ನೂ ಕಾಂಗ್ರೆಸ್ ಸರಕಾರ ಸರಿಯಾಗಿ ಜಾರಿ ಮಾಡಲಿಲ್ಲ ಎಂದು ಕಿಡಿಕಾರಿದರು.ನಂತರ ಶೇ.15ರ ಮೀಸಲಿನಲ್ಲಿಯೇ ಮೂರು ಭಾಗಗಳಲ್ಲಿ ವಿಂಗಡಿಸಿ ಒಳಮೀಸಲಾತಿ ಜಾರಿಗೊಳಿಸಲಾಗಿದೆ.

# ಕನ್ನಡ ಪತ್ರಿಕೆಗಳು ಸಮಾಜದ ಅಂಕು ಡೊಂಕುಗಳಿಗೆ ಕೈಗನ್ನಡಿ

■ ಉದಯರಶ್ಮಿ ದಿನಪತ್ರಿಕೆ

## ಇಂದು (ಜನೇವರಿ 29, ಬುಧವಾರ) "ಭಾರತೀಯ ವೃತ್ತಪತ್ರಿಕೆಯ ದಿನದ ಪ್ರಯುಕ್ತ ಈ ವಿಶೇಷ ಲೇಖನ

ಡಿ.ವ್ಹಿ.ಗುಂಡಪ್ಪ ಅವರು, "ಪತ್ರಿಕೋದ್ಯಮವು ಜನರನ್ನು ಪ್ರಬುದ್ಧರನ್ನಾಗಿ ಮಾಡಲು ಮತ್ತು ಸಮಾಜಕ್ಕೆ ಸರಿಯದ ದಾರಿಯನ್ನು ತೋರುವ ಏಕೈಕ ಮಾಧ್ಯಮವಾಗಿದೆ" ಎಂದು ಹೇಳಿದ್ದಾರೆ. ಸಮಾಜದ ಏಳ್ಗೆಗೆ ಮತ್ತು ಸಮಾಜದ ಅಂಕು ಡೊಂಕುಗಳ ಕೈಗನ್ನಡಿಯಾಗಿ ಸಮಾಜದ ಆಗುಹೋಗುಗಳ ಮೇಲೆ ಬೆಳಕು ಚೆಲ್ಲುತ್ತವೆ. ಅದರಲ್ಲೂ ಕನ್ನಡ ಪತ್ರಿಕೆಗಳು ಸ್ವಾತಂತ್ರ್ಯ ಪೂರ್ವದಲ್ಲಿ, ಸಂಗ್ರಾಮದಲ್ಲಿ ಮತ್ತು ಕರ್ನಾಟಕ ಏಕೀಕರಣದಂತಹ ಸಂದರ್ಭದಲ್ಲಿ ನಾಗರೀಕತೆಯ ಬೆಳವಣಿಗೆಯಲ್ಲಿ ಉತ್ತಮ ಸೇವೆಯನ್ನು ಸಲ್ಲಿಸಿದೆ. ನಮಗೆ ಜಗತ್ತಿನ ಎಲ್ಲ ಅಗು-ಹೋಗುಗಳ ಕುರಿತು ತಿಳಿಸಿಕೊಡುವುದೇ ವೃತ್ತಪತ್ರಿಕೆ. ಇಂದಿನ ಡಿಜಿಟಲ್ ಯುಗದಲ್ಲಿ ವೃತ್ತಪತ್ರಿಕೆಯು ಇ-ಪೇಪರ್,



ಸಾಮಾಜಿಕ ಜಾಲತಾಣ ಮತ್ತು ವಿವಿಧ ವೆಬಸೈಟಗಳ ಮೂಲಕವೂ ತಮ್ಮ ಕಾರ್ಯವ್ಯಾಪ್ತಿಯನ್ನು ಹೆಚ್ಚಿಸುತ್ತಾ ಅತ್ಯಂತ ವಿಶ್ವಾಸಾರ್ಹ ಸಂಪರ್ಕ-ಸಂವಹನ ಮಾಧ್ಯಮವಾಗಿ ಪರಿಣಮಿಸಿದೆ.

ಕನ್ನಡ ಭಾಷೆ, ಸಾಹಿತ್ಯ ಮತ್ತು ಕರುನಾಡಿನ ಸುದ್ದಿ ಪ್ರಕಟಿಸುವ ಪ್ರಥಮ ಪತ್ರಿಕೆ

ಜರ್ಮನ್ ಮಿಷನರಿ ರೆವರೆಂಡ್ ಹರ್ಮನ್ ಮ್ಯಾಗ್ಲಿಂಗ್ ಎಂಬುವವರಿಂದ ಸ್ಥಾಪಿತವಾದ ಕನ್ನಡ ಭಾಷೆಯ ಮೊದಲ ಮುದ್ರಿತ "ಮಂಗಳೂರು ಸಮಾಚಾರ" ಪತ್ರಿಕೆಯು 1843 ರ ಜುಲೈ 1 ರಂದು ಪ್ರಕಟಗೊಂಡಿತು. ಈ ಪತ್ರಿಕೆಯ ಐತಿಹಾಸಿಕ ದಿನದ ಸವಿ ನೆನಪಿಗಾಗಿ ಪ್ರತಿ ವರ್ಷ ಜುಲೈ 1 ರಂದು ರಾಜ್ಯದಲ್ಲಿ ಪತ್ರಿಕೋದ್ಯಮ ದಿನವನ್ನಾಗಿ ಆಚರಿಸಲಾಗುತ್ತಿದೆ. ಪ್ರಾರಂಭದಲ್ಲಿ ಇದೊಂದು ಪಾಕ್ಷಿಕ ಪತ್ರಿಕೆಯಾಗಿ ಪ್ರಕಟಗೊಂಡು ನಂತರ ಕನ್ನಡ ಭಾಷೆ, ಸಾಹಿತ್ಯ ಮತ್ತು ರಾಜ್ಯದ ಸುದ್ದಿಗಳನ್ನು ಜನರಿಗೆ ತಲುಪಿಸುವಲ್ಲಿ ಪ್ರಮುಖವಾದ ಪಾತ್ರವನ್ನು ವಹಿಸಿತು. ಪತ್ರಿಕೋದ್ಯಮದ ಪರಿಚಯ, ಅದರ ಹಿನ್ನೆಲೆ, ಕಾಲ ಕಾಲಕ್ಕೆ ತಕ್ಕಂತೆ ಆಗುತ್ತಿರುವ ಬದಲಾದ ಮುದ್ರಣ ಮಾಧ್ಯಮದ ಕಾರ್ಯವೈಖರಿ, ಪತ್ರಿಕೋದ್ಯಮದ ಪ್ರಾಮುಖ್ಯತೆ ಮತ್ತು ಪತ್ರಕರ್ತರ ಅಮೂಲ್ಯವಾದ ಕೊಡುಗೆಯನ್ನು ಜನ ಸಾಮಾನ್ಯರಿಗೆ ತಿಳಿಸಬೇಕೆಂಬ ಮಹೋನ್ನತವಾದ ಉದ್ದೇಶದಿಂದ ಕರ್ನಾಟಕದಲ್ಲಿ "ಪತ್ರಿಕಾ ದಿನಾಚರಣೆ" ಯನ್ನು ಆಚರಿಸಲಾಗುತ್ತದೆ. ಗೌರವಿಸುವ ಮತ್ತು ಸ್ಮರಿಸುವ ಸುದಿನವಾಗಿದೆ, ಡಿಜಿಟಲ್ ಯುಗದಲ್ಲಿ ನಮ್ಮ ಸಾಂಪ್ರದಾಯಿಕ ಪತ್ರಿಕೋದ್ಯಮದ ಕುರಿತು ಓದುಗರಲ್ಲಿ ಉತ್ತೇಜಿಸುವುದು ಮತ್ತು ಅರಿವು



ಮೂಡಿಸುವದು ಈ ದಿನದ ಆಚರಣೆಯ ಪ್ರಮುಖ ಉದ್ದೇಶವಾಗಿದೆ. ಅದಕ್ಕಾಗಿ ಹರ್ಮನ್ ಮೊಗ್ಲಿಂಗ್ ಅವರನ್ನು ಕನ್ನಡ ಪತ್ರಿಕೋದ್ಯಮದ ಪಿತಾಮಹ ಎಂದೂ ಕರೆಯಲಾಗುತ್ತದೆ.

ಸಾಮಾಜಿಕ ಪರಿವರ್ತನೆ ತರುವಲ್ಲಿ ಪತ್ರಿಕೆಗಳ ಪಾತ್ರ ಅಮೂಲ್ಯವಾದುದು

ಪತ್ರಿಕೋದ್ಯಮದ ಇತಿಹಾಸ, ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಮತ್ತು ಸಮಾಜದ ಅಂಕು ಡೊಖುಗಳನ್ನು ತಿದ್ದುವಲ್ಲಿ ಕನ್ನಡ ನಾಡಿನ ಪತ್ರಿಕೆಗಳು ಅಮೂಲ್ಯವಾದ ಕೊಡುಗೆ ನೀಡಿವೆ. ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಮತ್ತು ನಾಡಿನ ಜನಪರ ಕಾರ್ಯಯೋಜನೆಗಳನ್ನು ಪ್ರತಿಬಿಂಬಿಸುವಲ್ಲಿ ಮಹತ್ವದ ಕಾರ್ಯ ನಿರ್ವಹಿಸಿವೆ. ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಮುದ್ರಣ ಮಾಧ್ಯಮದ ಮಹತ್ವವನ್ನು ಸಾರಲು ಪತ್ರಿಕೆಗಳು ತಮ್ಮ ಮೌಲ್ವಿಕ ಸುದ್ದಿ ಮತ್ತು ವಿಚಾರಧಾರೆಗಳ ಮೂಲಕ ಸಮಾಜದಲ್ಲಿ ಬದಲಾವಣೆಯನ್ನು ತರುವಲ್ಲಿ ತನ್ನದೇ ಆದ ಪಾತ್ರವನ್ನು ನಿರ್ವಹಿಸುತ್ತಿವೆ. ಅದರ ಜತೆಗೆ ಪತ್ರಕರ್ತರ ಹಕ್ಕುಗಳನ್ನು ರಕ್ಷಿಸುವಲ್ಲಿ ಈ ದಿನದ ಜಾಗೃತಿ ಅಗತ್ಯವಾಗಿದೆ. ಪ್ರತಿಯೊಬ್ಬರ ವಾಕ್ ಸ್ವಾತಂತ್ರ್ಯವನ್ನು ಎತ್ತಿ ಹಿಡಿಯುತ್ತಾ, ಸಾರ್ವಜನಿಕರಿಗೆ ನಿಖರವಾದ ಮಾಹಿತಿಯನ್ನು ತಲುಪಿಸುವಲ್ಲಿ ಪತ್ರಕರ್ತರ ಅಮೂಲ್ಯವಾದ ಪಾತ್ರವನ್ನು ಗೌರವಿಸುವುದು ಈ ದಿನದ ಆಚರಣೆಯ ಧ್ಯೇಯೋದ್ದೇಶವಾಗಿದೆ.

### ಪತ್ರಿಕಾ ದಿನದ ಮಹತ್ವ

ಪತ್ರಿಕೆಗಳಲ್ಲಿ ಪ್ರಕಟಗೊಳ್ಳುವ ವಿಚಾರಗಳು ಮತ್ತು ಪ್ರಚಲಿತ ಘಟನೆಗಳು ಇಡೀ ಜಗತ್ತಿನಲ್ಲಿ ನಡೆದು ಹೋದ ಸನ್ನಿವೇಶ, ಘಟನೆ ಮತ್ತು ಸಂದರ್ಭಗಳನ್ನು ತಿಳಿಸಿಕೊಡುತ್ತವೆ. ಅದರಲ್ಲೂ ವಿಶೇಷವಾಗಿ ಮಕ್ಕಳು ಪತ್ರಿಕೆಗಳನ್ನು ದೈನಂದಿನವಾಗಿ ಓದುವುದರಿಂದ ಓದುವ ಹವ್ಯಾಸ ಮತ್ತು ಸಂವಹನ ಕೌಶಲ್ಯ ವೃದ್ಧಿಸಿ ಗ್ರಹಿಕಾಶಕ್ತಿಯನ್ನು ಸುಧಾರಿಸುತ್ತವೆ. ಎಲ್ಲ ರಂಗಗಳ ಬಗ್ಗೆ ವಿಶೇಷ ಅಂಕಣಗಳ ಮೂಲಕ ವಿಶ್ಲೇಷಣಾತ್ಮಕ ಚಿಂತನೆಯನ್ನು ಪ್ರೋತ್ಸಾಹಿಸುತ್ತವೆ. ವೃತ್ತಪತ್ರಿಕೆಗಳು ಸಾರ್ವಜನಿಕ ಸಂವಾದವನ್ನು ಏರ್ಪಡಿಸಿ ಜನರಿಗೆ ಹೊಸ ಸಂಗತಿ, ವಿಷಯಗಳು ಮತ್ತು ಚರ್ಚೆಗಳ ಮೇಲೆ ಬೆಳಕು ಚೆಲ್ಲುತ್ತಿವೆ.

### ಕೊನೆಯ ನುಡಿ

ಜೇಮ್ಸ್ ಎಲ್ಲೀಸ್ ಅವರು, "ವೃತ್ತಪತ್ರಿಕೆಗಳು ಈ ಜಗತ್ತಿನ ಕನ್ನಡಿ ಇದ್ದಂತೆ" ಎಂದು ಹೇಳಿದ್ದಾರೆ.ಆದ-



ರಿಂದ ಸಮಾಜವನ್ನು ಜಾಗೃತಗೊಳಿಸುವಲ್ಲಿ ಅತ್ಯಂತ ಪರಿಣಾಮಕಾರಿ ಮತ್ತು ಗಣನೀಯ ಕೊಡುಗೆ ನೀಡುತ್ತಿರುವ ವೃತ್ತಪತ್ರಿಕೆ ದಿನದಂದು ಪರ್ತಕರ್ತರ ಕಾರ್ಯವನ್ನು ಗೌರವಿಸುವದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಈ ದಿನದಂದು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಿದ್ಯಾರ್ಥಿ, ಯುವಕರು ಮತ್ತು ಓದುಗರಲ್ಲಿ ವೃತ್ತಪತ್ರಿಕೆಯ ಪಾತ್ರ, ಮಹತ್ವ, ಪರ್ತಕರ್ತರ ಸೇವೆಯನ್ನು ಜನರಿಗೆ ಜನರಿಗೆ ತಿಳಿಸುವ ಕಾರ್ಯ ನಡೆಯಬೇಕಾಗಿದೆ. ಅದಕ್ಕಂತಲೇ ಪತ್ರಿಕೆಗಳಿಗೆ 'ಜ್ಞಾನದ ಕಣಜ' ಮತ್ತು 'ಸತ್ಯದ ಪ್ರತಿಬಿಂಬ' ಎಂತಲೂ ಕರೆಯಬಹುದು.

ಲೇಖನ
– ಮಲ್ಲಪ್ಪ. ಸಿ. ಖೊದ್ನಾಪೂರ
(ತಿಕೋಟಾ)
ವಿಜಯಪುರ



# ಮನ್ ಕೀ ಬಾತ್‌ನಲ್ಲಿ ಆತ್ಮನಿರ್ಭರ ಭಾರತದ ಸಂಕಲ್ಪ ಪ್ರತಿಧ್ವನಿಸಿದೆ



ಯಾದಗಿರಿ: ಪ್ರಧಾನಿ ನರೇಂದ್ರ ಮೋದಿ ಅವರ "ಮನ್ ಕೀ ಬಾತ್" ಕಾರ್ಯಕ್ರಮವು ದೇಶದ ಸಾಧನೆಗಳು, ಜನರ ಯಶೋಗಾಥೆಗಳು ಹಾಗೂ ಆತ್ಮನಿರ್ಭರ ಭಾರತದ ಸಂಕಲ್ಪವನ್ನು ಜನರಿಗೆ ತಲುಪಿಸುವ ಮಹತ್ವದ ವೇದಿಕೆಯಾಗಿದೆ ಎಂದು ಬಿಜೆಪಿ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಮಹೇಶರೆಡ್ಡಿ ಮುದ್ನಾಳ ಹೇಳಿದರು.

ನಗರದ ವಾರ್ಡ್ ನಂ.11ರ ಮಹಿಪಾಲರೆಡ್ಡಿ ಅವರ ಮನೆಯಲ್ಲಿ ಭಾನುವಾರ ಪ್ರಧಾನಿ ನರೇಂದ್ರ ಮೋದಿ ಅವರ 135ನೇ "ಮನ್ ಕೀ ಬಾತ್" ಕಾರ್ಯಕ್ರಮದ ನೇರಪ್ರಸಾರ ವೀಕ್ಷಿಸಿದ ಬಳಿಕ ಅವರು ಮಾತನಾಡಿದರು.

"ಮನ್ ಕೀ ಬಾತ್" ಕೇವಲ ಒಂದು ಕಾರ್ಯಕ್ರಮವಲ್ಲ, ಇದು ದೇಶದ ಜನರೊಂದಿಗೆ ನೇರ ಸಂವಾದ ನಡೆಸುವ, ಸಾಧಕರ ಸಾಧನೆಗಳನ್ನು ಪರಿಚಯಿಸುವ ಹಾಗೂ ರಾಷ್ಟ್ರಭಕ್ತಿ ಮತ್ತು ಜನಸಹಭಾಗಿತ್ವದ ಭಾವನೆ ಮೂಡಿಸುವ ವಿಶಿಷ್ಟ ಪ್ರಯತ್ನವಾಗಿದೆ ಎಂದು ಹೇಳಿದರು.

ಭಾರತದಲ್ಲಿಯೇ ಅಭಿವೃದ್ಧಿಪಡಿಸಲಾದ ಜ್ಞಾನಾಸ್ತ್ರ ಕ್ಷಿಪಣಿಯ ಯಶಸ್ವಿ ಪರೀಕ್ಷೆ ಹಾಗೂ ಭಾರತೀಯ ನೌಕಾಪಡೆಗೆ ಐಎನ್‌ಎಸ್ ದುನಾಗಿರಿ, ಐಎನ್‌ಎಸ್ ಸಂಶೋಧಕ ಮತ್ತು ಐಎನ್‌ಎಸ್ ಅಗ್ರಯ್ ಯುದ್ಧನೌಕೆಗಳ ಸೇರ್ಪಡೆಯಿಂದ ದೇಶದ ರಕ್ಷಣಾ ಸಾಮರ್ಥ್ಯ ಮತ್ತಷ್ಟು ಬಲಗೊಂಡಿದೆ. ಪ್ರಧಾನಿ ಮೋದಿ ಅವರು ಈ ಸಾಧನೆಗಳನ್ನು ದೇಶದ ಜನತೆಗೆ ತಿಳಿಸಿರುವುದು ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆಯ ವಿಷಯವಾಗಿದೆ ಎಂದರು.

ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ಮೂಢನಂಬಿಕೆಗಳಿಂದ ದೂರ ಉಳಿಯಬೇಕು ಎಂಬ ಪ್ರಧಾನಿ ಅವರ ಸಂದೇಶ ಸಮಾಜದ ಪ್ರಗತಿಗೆ ಅಗತ್ಯವಾಗಿದೆ. ಚಿನ್ನದ ಮರುಬಳಕೆ, ಇಂಧನ ಉಳಿತಾಯ ಸೇರಿದಂತೆ ಜನಪರ ಕಾರ್ಯಗಳಲ್ಲಿ ತೊಡಗಿರುವ ನಾಗರಿಕರನ್ನು ಪ್ರಧಾನಿ ಅಭಿನಂದಿಸಿರುವುದು ಅವರ ಜನಪರ ಕಾಳಜಿಯನ್ನು ತೋರಿಸುತ್ತದೆ ಎಂದು ಮಹೇಶರೆಡ್ಡಿ ಮುದ್ನಾಳ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ನಗರ ಮಂಡಲ ಅಧ್ಯಕ್ಷ ಲಿಂಗಪ್ಪ ಹತ್ತಿಮನಿ, ಪ್ರಧಾನ ಕಾರ್ಯದರ್ಶಿ ರಮೇಶ್ ದೊಡ್ಡಮನಿ, ಮಲ್ಲಿಕಾರ್ಜುನ ಕಟ್ಟಿಮನಿ, ರವಿ ಭಾಪೂರೆ, ಮಾರುತಿ ಕಲಾಲ್, ಸುಗರೆಡ್ಡಿ, ನಗರಸಭೆ ಸದಸ್ಯ ಸ್ವಾಮಿದೇವ ದಾಸನಕೇರಿ, ಮಹದೇವಪ್ಪ ಗಣಪುರ, ನಾಗಪ್ಪ ಬೆನಕಲ್, ರಮೇಶ್ ಕೋಟಿಮನಿ, ಬಸವರಾಜಪ್ಪ ವಡೆಗೇರಾ, ಕಲ್ಲಪ್ಪ ಕೊಂಡಗುಳ್ಳಿ, ಶಿವಣ್ಣ ಬಡಿಗೇರ, ಶ್ರೀನಾಥ ಜೈನ್, ಪವನ್ ಲಿಂಗೇರಿ, ಯುವ ಮೋರ್ಚಾ ಅಧ್ಯಕ್ಷ ಅಜಯ್ ಮಡ್ಡಿ, ಕರಣ್ ಸುಮ್ರ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಯಲ್ಹೇರಿಯಲ್ಲಿ ಮನೆ ಮನೆಗೆ ಪೋಲಿಯೋ ಜಾಗೃತಿ ಅಭಿಯಾನ



ಯಾದಗಿರಿ: ಪೋಲಿಯೋ ಮುಕ್ತ ಭಾರತ ನಿರ್ಮಾಣದ ಸಂಕಲ್ಪದೊಂದಿಗೆ ಯಲ್ಹೇರಿ ಗ್ರಾಮ ಪಂಚಾಯಿತಿ ಹಾಗೂ ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಗ್ರಾಮದಲ್ಲಿ ಮನೆ ಮನೆಗೆ ಭೇಟಿ ನೀಡಿ ಪೋಲಿಯೋ ಹನಿ ಕುರಿತು ಜಾಗೃತಿ ಮೂಡಿಸುವ ಹಾಗೂ ಲಸಿಕಾ ಅಭಿಯಾನ ನಡೆಸಲಾಯಿತು.

ಈ ವೇಳೆ ಮಾತನಾಡಿದ ಯಲ್ಹೇರಿ ಸಮುದಾಯ ಆರೋಗ್ಯ ಅಧಿಕಾರಿ ಜೋಸ್ಲೀನ್ ಜೂಲಿ, ಭಾರತ ಸರ್ಕಾರವು 1995ರಿಂದ ಪೋಲಿಯೋ ನಿರ್ಮೂಲನೆಗಾಗಿ ನಿರಂತರವಾಗಿ ಬೃಹತ್ ಲಸಿಕಾ ಅಭಿಯಾನಗಳನ್ನು ನಡೆಸುತ್ತಿದ್ದು, ಇದರ ಪರಿಣಾಮವಾಗಿ ದೇಶವು ಪೋಲಿಯೋ ಮುಕ್ತ ರಾಷ್ಟ್ರವಾಗಿ ಗುರುತಿಸಿಕೊಂಡಿದೆ ಎಂದು ಹೇಳಿದರು.ಈ ಸಾಧನೆಯನ್ನು ಮುಂದುವರಿಸಿಕೊಂಡು ಹೋಗಲು ಪ್ರತಿಯೊಬ್ಬ ಪಾಲಕರು ತಮ್ಮ ಐದು ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಹನಿ ಹಾಕಿಸಬೇಕು. ಮಕ್ಕಳ ಆರೋಗ್ಯದ ರಕ್ಷಣೆಯಲ್ಲಿ ಲಸಿಕೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು. ಪೋಲಿಯೋ ವೈರಸ್ ಮಗುವಿನ ನರಮಂಡಲದ ಮೇಲೆ ಪರಿಣಾಮ ಬೀರಿ ಶಾಶ್ವತ ಅಂಗವೈಕಲ್ಯಕ್ಕೆ ಕಾರಣವಾಗುವ ಸಾಧ್ಯತೆ ಇದೆ. ಹೀಗಾಗಿ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡದೆ ಸಮಯಕ್ಕೆ ಸರಿಯಾಗಿ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವ ಮೂಲಕ ಆರೋಗ್ಯ ರಕ್ಷಣೆ ಮಾಡಬೇಕು ಎಂದು ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಕರವಸೂಲಿಗಾರ ಅಯ್ಯಣ್ಣ ಮಾತನಾಡಿ, ಪೋಲಿಯೋ ನಿರ್ಮೂಲನ 'ಗಾಗಿ ಸರ್ಕಾರ ಪ್ರತಿವರ್ಷ ವಿಶೇಷ ಅಭಿಯಾನಗಳನ್ನು ಹಮ್ಮಿಕೊಳ್ಳುತ್ತಿದೆ. ಆಶಾ ಕಾರ್ಯಕರ್ತೆಯರು ಹಾಗೂ ಅಂಗನವಾಡಿ ಸಿಬ್ಬಂದಿ ಮನೆ ಮನೆಗೆ ತೆರಳಿ ಮಕ್ಕಳಿಗೆ ಪೋಲಿಯೋ ಹನಿ ನೀಡುವ ಕಾರ್ಯ ಮಾಡುತ್ತಿದ್ದಾರೆ. ಸಾರ್ವಜನಿಕರು ಸಹಕರಿಸಿ ಅಭಿಯಾನ ಯಶಸ್ವಿಗೊಳಿಸಬೇಕು ಎಂದು ಹೇಳಿದರು. ಅಭಿಯಾನದ ಸಂದರ್ಭದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆ ನಾಗಮ್ಮ, ಗ್ರಾಮದ ಮುಖ್ಯಸ್ಥ ಶರಣು ಕಾಳೋರ್, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಗ್ರಾಮಸ್ಥರು ಭಾಗವಹಿಸಿ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವಂತೆ ಜಾಗೃತಿ ಮೂಡಿಸಿದರು. "ಎರಡು ಹನಿ ಜೀವನದ ರಕ್ಷಣೆ" ಎಂಬ ಸಂದೇಶದೊಂದಿಗೆ ನಡೆದ ಅಭಿಯಾನಕ್ಕೆ ಗ್ರಾಮಸ್ಥರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.



# ಜೆಡಿಎಸ್ ನಿಂದ ಎಸ್‌ಐಆರ್, ಬಿಎಲ್‌ಎ 2 ಕಾರ್ಯಾಗಾರ

ಬೀದರ್: ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರ ತೋಟದ ಮನೆಯ ಆವರಣದಲ್ಲಿ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್), ಬಿಎಲ್‌ಎ 2 ಕಾರ್ಯಾಗಾರ' ವನ್ನು ಜೆಡಿಎಸ್ ಪಕ್ಷ ಹಮ್ಮಿಕೊಂಡಿತ್ತು. ಮಾಜಿ ಸಚಿವರಾದ ಬಂಡೆಪ್ಪ ಖಾಶೆಂಪುರ್, ಜೆಡಿಎಸ್ ರಾಜ್ಯ ವಕ್ತಾರರು ಹಾಗೂ ಬಿಎಲ್‌ಎ 2 ಕಾರ್ಯಾಗಾರದ ಉಸ್ತುವಾರಿ ಜಿ ಪಿ ಅಶ್ವಿನ್ ಕುಮಾರ್, ಜೆಡಿಎಸ್ ಜಿಲ್ಲಾಧ್ಯಕ್ಷರಾದ ರಮೇಶ್ ಪಾಟೀಲ್ ಸೋಲ್ಪೂರ್ ರವರ ಮುಖಂಡತ್ವದಲ್ಲಿ ಭಾನುವಾರ ನಡೆದ ಕಾರ್ಯಕ್ರಮದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಜೆಡಿಎಸ್ ನಾಯಕರು ಜಾಗೃತಿ ಮೂಡಿಸಿದರು. ಇದೇ ವೇಳೆ ಪಕ್ಷದಿಂದ ಬಿಎಲ್‌ಎಗಳಾಗಿ ನೇಮಕಗೊಂಡ ಕಾರ್ಯಕರ್ತರಿಗೆ ಬ್ಯಾಡ್ಜ್ ಹಾಗೂ ಗುರುತಿನ ಚೀಟಿಯನ್ನು ವಿತರಿಸಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಸ್ಕ್ರೀನ್ ಮೂಲಕ ಮಾಹಿತಿ ಹಂಚಿಕೊಂಡರು.

ಈ ವೇಳೆ ಮಾತನಾಡಿದ ಜೆಡಿಎಸ್ ರಾಜ್ಯ ವಕ್ತಾರರು ಹಾಗೂ ಬಿಎಲ್‌ಎ 2 ಕಾರ್ಯಾಗಾರದ ಉಸ್ತುವಾರಿ ಜಿ ಪಿ ಅಶ್ವಿನ್ ಕುಮಾರ್ ರವರು, ಬಂಡೆಪ್ಪ ಖಾಶೆಂಪುರ್ ರವರು ರಾಜ್ಯ ಮಟ್ಟದ ನಾಯಕರಾಗಿದ್ದಾರೆ. ಎಸ್‌ಐಆರ್ ಕಾರ್ಯಾಗಾರವನ್ನು ಅವರು ಹಮ್ಮಿಕೊಂಡಿದ್ದಾರೆ. ಇದನ್ನು ಕ್ಷೇತ್ರದ ಮುಖಂಡರು, ಕಾರ್ಯಕರ್ತರು ಸದುಪಯೋಗ ಪಡೆದುಕೊಳ್ಳಬೇಕು. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಕ್ಷರಣೆಯ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕಾಗಿದೆ ಎಂದರು.

ಎಸ್‌ಐಆರ್ ಬಗ್ಗೆ ಅಶ್ವಿನ್ ಕುಮಾರ್ ರವರು ಬಹಳಷ್ಟು ಸವಿಸ್ತಾರವಾಗಿ ಹೇಳಿದ್ದಾರೆ. ನಮ್ಮ ಪಕ್ಷದಿಂದ ಬಿಎಲ್‌ಎ ಅಂತ ನೇಮಕ ಆಗಿರುವವರು ಶ್ರಮ ವಹಿಸಿ ಕೆಲಸ ಮಾಡಬೇಕಾಗಿದೆ. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕಾಗಿದೆ ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಹೇಳಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷರಾದ ರಮೇಶ್ ಪಾಟೀಲ್ ಸೋಲ್ಪೂರ್, ಪ್ರಮುಖರಾದ ಮಾರುತಿ ಖಾಶೆಂಪುರ್, ಮಾರುತಿ ಬೌದ್ಧೆ, ಸಜ್ಜದ್ ಸಾಹೇಬ್, ಶಾಂತಕುಮಾರ್ ಸಾವಳಗಿ, ದೇವೇಂದ್ರ ಸೋನಿ, ಸಂಜುರೆಡ್ಡಿ ನಿರ್ಣಾ, ರಾಜು ಕಡ್ಯಾಳ, ತರುಣ್ ನಾಗಮಾರಪಳ್ಳಿ, ಸಂತೋಷ್ ರಾಸೂರೆ, ಜಾಪೆಡ್ ಕಡ್ಯಾಳ, ಅಭಿ ಕಾಳೆ, ಬೊಮಗೊಂಡ ಚಿಟ್ಟಾವಾಡಿ, ರೇವಣಸಿದ್ದಪ್ಪ ಸಿರಕಟ್ಟನಳ್ಳಿ, ಇಸ್ಲಾಹಿಲ್ ಸಾಬ್, ಲಲಿತಾ ಕರಂಜೆ ಸೇರಿದಂತೆ ಅನೇಕರಿದ್ದರು.

# ಸಾಂಪ್ರದಾಯಿಕ ಬಂಜಾರಾ ವೇಷಭೂಷಣದಲ್ಲಿ ಮನ್ ಕಿ ಬಾತ್ ವೀಕ್ಷಿಸಿದ ಶಾಸಕ ಪ್ರಭು ಚವ್ಹಾಣ



ಕಮಲನಗರ: ಕಮಲನಗರ ತಾಲೂಕಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಹತ್ವದ 'ಮನ್ ಕಿ ಬಾತ್' ಕಾರ್ಯಕ್ರಮದ ನೇರ ಪ್ರಸಾರವನ್ನು ಭಾನುವಾರ ದೇಶದ 17 ಆಯ್ದ ಸ್ಥಳಗಳಲ್ಲಿ ಆಯೋಜಿಸಿದ್ದು, ಕರ್ನಾಟಕದಿಂದ ಬೀದರ ಜಿಲ್ಲೆಯ ಕಮಲನಗರದಲ್ಲಿ ನಡೆಯಿತು.

ಕಮಲನಗರದ ಎಂ.ಎ. ಬಿರಾದಾರ ಫಂಕ್ಷನ್ ಹಾಲನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ತಲೆಯ ಮೇಲೆ ವಿಶೇಷ ಪೇಟಾ, ಧೋತಿ ಹಾಗೂ ಬಂಜಾರಾ ಕುಸುರಿ ಕಲೆಯಿಂದ ತಯಾರಿಸಲಾದ ವಿಶೇಷ ಶಾಲು ಧರಿಸಿ, ತಮ್ಮ ಧರ್ಮಪತ್ನಿಯವರೊಂದಿಗೆ ಸಾಂಪ್ರದಾಯಿಕ ಬಂಜಾರಾ ಉಡುಗೆಯಲ್ಲಿ ಭಾಗವಹಿಸಿ ಪ್ರಧಾನಮಂತ್ರಿಯವರ ಮನ್ ಕಿ ಬಾತ್ ಕಾರ್ಯಕ್ರಮವನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಪ್ರಭು ಚವ್ಹಾಣ ಅವರು, ಈ ಬಾರಿ ಮನ್ ಕಿ ಬಾತ್ ಕಾರ್ಯಕ್ರಮ ಕಮಲನಗರದಲ್ಲಿ ನಡೆದಿರುವುದು ಬಹಳಷ್ಟು ಸಂತೋಷವಾಗಿದೆ ಎಂದರು.

ಮನ್ ಕಿ ಬಾತ್ ಕಾರ್ಯಕ್ರಮವು ದೇಶದ ಜನರೊಂದಿಗೆ ಪ್ರಧಾನಮಂತ್ರಿಯವರು ನೇರವಾಗಿ ಸಂವಾದ ನಡೆಸುವ ವಿಶಿಷ್ಟ ವೇದಿಕೆಯಾಗಿದೆ. ದೇಶದ ಏಳಿಗೆ, ರೈತರ ಅಭಿವೃದ್ಧಿ, ಪ್ರಕೃತಿ ಸಂರಕ್ಷಣೆ, ಮಹಿಳಾ ಸಬಲೀಕರಣ, ಯುವಜನತೆಗೆ ಮಾರ್ಗದರ್ಶನ, ನವೋದ್ಯಮ, ಸ್ವಚ್ಛತೆ, ಆರೋಗ್ಯ, ಸ್ಥಳೀಯ ಉತ್ಪನ್ನಗಳಿಗೆ ಉತ್ತೇಜನ, ಸಾಮಾಜಿಕ ಜಾಗೃತಿ ಸೇರಿದಂತೆ ಪ್ರತಿ ತಿಂಗಳು ವಿಭಿನ್ನ ವಿಷಯಗಳ ಕುರಿತು ದೇಶವಾಸಿಗಳೊಂದಿಗೆ ತಮ್ಮ ವಿಚಾರಗಳನ್ನು ಹಂಚಿಕೊಳ್ಳುವ ಮೂಲಕ ಜನರಲ್ಲಿ ಸಕಾರಾತ್ಮಕ ಚಿಂತನೆ ಮತ್ತು ರಾಷ್ಟ್ರಭಕ್ತಿಯ ಮನೋಭಾವ ಬೆಳೆಸುತ್ತಿರುವ ಏಕೈಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಾಗಿದ್ದಾರೆ ಎಂದು ಹೇಳಿದರು.

ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿಯವರು 'ಏಕ್ ಪೇಡ್ ಮಾಂ ಕೆ ನಾಮ್' ಅಭಿಯಾನದ ಮೂಲಕ ಪರಿಸರ ಸಂರಕ್ಷಣೆಯ ಮಹತ್ವವನ್ನು ಮತ್ತೊಮ್ಮೆ ಒತ್ತಿ ಹೇಳಿದರು. ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಯಶಸ್ಸು, ದೇಶದ ವಿವಿಧ ಭಾಗಗಳಲ್ಲಿ ಜನರು ನಡೆಸುತ್ತಿರುವ ಜಲ ಸಂರಕ್ಷಣೆ, ಸ್ವಚ್ಛತೆ, ಜನಸಾಮಾನ್ಯರ ಹೊಸ ಆವಿಷ್ಕಾರಗಳು, ಮಹಿಳಾ ಸಬಲೀಕರಣ, ಯುವಕರ ಸಾಧನೆಗಳು ಹಾಗೂ 'ವೋಕಲ್ ಫಾರ್ ಲೋಕಲ್' ಮೂಲಕ ಸ್ವದೇಶಿ ಉತ್ಪನ್ನಗಳಿಗೆ ಬೆಂಬಲ ನೀಡುವ ಕುರಿತು ದೇಶದ ಜನತೆಗೆ ಕರೆ ನೀಡಿದರು. ರಾಷ್ಟ್ರದ ಅಭಿವೃದ್ಧಿಯಲ್ಲಿ ಪ್ರತಿಯೊಬ್ಬ ನಾಗರಿಕರ ಪಾಲ್ಗೊಳ್ಳುವಿಕೆ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಸಂದೇಶ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಬಸವಕಲ್ಯಾಣ ಶಾಸಕ ಶರಣು ಸಲಗರ, ಮಾಜಿ ಶಾಸಕರಾದ ಪ್ರಕಾಶ ಖಂಡ್ರೆ, ಈಶ್ವರಸಿಂಗ್ ಠಾಕೂರ, ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ, ಜಿಲ್ಲಾ ಉಪಾಧ್ಯಕ್ಷ ಅರಹಂತ ಸಾವಳೆ, ಪ್ರಧಾನ ಕಾರ್ಯದರ್ಶಿಗಳಾದ ಕಿರಣ ಪಾಟೀಲ, ಪೀರಪ್ಪ ಔರಾದೆ, ಮುಖಂಡರಾದ ರಾಜಶೇಖರ ನಾಗಮೂರ್ತಿ, ಬಾಬು ವಾಲಿ, ವಸಂತ ಬಿರಾದಾರ, ಬಸವರಾಜ ಪಾಟೀಲ, ಸತೀಷ ಪಾಟೀಲ, ಶಿವಾಜಿರಾವ ಪಾಟಿಲ ಮುಂಗನಾಳ, ಸುರೇಶ ಭೋಸ್ಲೆ, ಶಿವಾನಂದ ವಡ್ಡೆ, ಖಂಡೋಬಾ ಕಂಗಟೆ, ಪ್ರವೀಣ ಕಾರಬಾರಿ, ಕೇರಬಾ ಪವಾರ, ದಯಾನಂದ ಘೂಳೆ, ಬಂಟಿ ರಾಂಪೂರೆ, ಉದಯ ಸೋಲಾಪೂರೆ, ರವೀಂದ್ರ ರೆಡ್ಡಿ, ಸಂಜು ಮುರ್ಕೆ, ಗಿರೀಶ ವಡೆಯಾರ್, ಶಿವು ಜುಲ್ಫೆ, ವೀರೂ ದಿಗ್ವಾಲ, ಸುಜಿತ ರಾಠೋಡ, ಪ್ರದೀಪ ಪವಾರ, ಪ್ರಭುರಾವ ಜೀರ್ಗೆ ಸೇರಿದಂತೆ ಪಕ್ಷದ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಕಾರ್ಯಕ್ರಮವನ್ನು ವೀಕ್ಷಿಸಿದರು.



# ಮಹಾತ್ಮ ಬೊಮ್ಮಗೊಂಡೇಶ್ವರರ ಆದರ್ಶಗಳು ಯುವಜನತೆಗೆ ಸ್ಫೂರ್ತಿ: ಭೀಮಶಾ ಬಸಲಾಪುರ್

ಬೀದರ್ : ಮಹಾತ್ಮ ಬೊಮ್ಮಗೊಂಡೇಶ್ವರರು 14 ಮತ್ತು 15ನೇ ಶತಮಾನದಲ್ಲಿ ಜನ್ಮ ತಾಳಿದ ಮಹಾನ್ ಸಂತರೆಂದು ತಿಳಿಯಲಾಗಿದ್ದು, ಮೈಲಾರ ಮಲ್ಲಣ್ಣ ಅವರು ಮನೆದೇವರಾಗಿದ್ದರು. ತಿರುಪತಿ ತಿಮ್ಮಪ್ಪನಿಗೆ ಏಳು ಕೋಟಿ ರೂಪಾಯಿ ಸಾಲ ನೀಡಿದ ಕುರಿತು ಇತಿಹಾಸದಿಂದ ತಿಳಿಯಬಹುದಾಗಿದೆ. ಅಲ್ಲದೆ, ಅಂದಿನ ಬಹಮನಿ ಸುಲ್ತಾನರಿಗೆ ಮಾರ್ಗದರ್ಶಕರಾಗಿಯೂ ಸೇವೆ ಸಲ್ಲಿಸಿದ್ದರು ಎಂದು ಗ್ರೇಡ್-1 ಅನುದಾನಿತ ದೈಹಿಕ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷ ಭೀಮಶಾ ಬಸಲಾಪುರ್ ಹೇಳಿದರು.

ರವಿವಾರ ಬೆಳಿಗ್ಗೆ ನಗರದ ಗಾಂಧಿಗಂಜ್‌ನ ಕನಕ ಭವನದಲ್ಲಿ ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘ (ರಿ), ಬೀದರ ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಮಹಾತ್ಮ ಬೊಮ್ಮಗೊಂಡೇಶ್ವರರ ಕುರಿತು ಉಪನ್ಯಾಸ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಮಹಾತ್ಮ ಬೊಮ್ಮಗೊಂಡೇಶ್ವರರ ಕಾಯಕನಿಷ್ಠೆ, ಶ್ರದ್ಧೆ ಮತ್ತು ಭಕ್ತಿಯನ್ನು ಕಂಡು ಅಂದಿನ ರಾಜರು ನಿನಗೆ ಏನು ಬೇಕು? ಎಂದು ಕೇಳಿದಾಗ, ನನಗೇನೂ ಬೇಡ. ನನ್ನ ಸಮಾಜದ ಬಂಧುಗಳಿಗೆ ಕುರಿ ಕಾಯಲು ಅರಣ್ಯದಲ್ಲಿ ಗೋಮಾಳ ಮೀಸಲಿಡಿ ಹಾಗೂ ಅವರಿಗೆ ರಕ್ಷಣೆ ನೀಡಿ ಸಾಕು ಎಂದು ವಿನಂತಿಸಿಕೊಂಡಿದ್ದರು. ಇದು ಅವರ ಸಮಾಜಮುಖಿ ಚಿಂತನೆಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ವಿಶೇಷ ಉಪನ್ಯಾಸ ನೀಡಿದ ಯುವ ಸಾಹಿತಿ ಸಂಗಪ್ಪ ತೌಡಿ ಮಾತನಾಡಿ, ಹಾಲುಮತ ಸಮಾಜದಲ್ಲಿ ಅನೇಕ ಮಹಾತ್ಮರು, ಸಂತರು ಹಾಗೂ ಶರಣರು ಜನ್ಮ ತಾಳಿ ಸಮಾಜಕ್ಕೆ ಆದರ್ಶ ಜೀವನದ ಮಾರ್ಗವನ್ನು ತೋರಿಸಿಕೊಟ್ಟಿದ್ದಾರೆ. ಅವರ ತತ್ವ-ಆದರ್ಶಗಳು ಇಂದಿಗೂ ಪ್ರಸ್ತುತವಾಗಿದ್ದು, ಯುವ ಜನತೆ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಮಹಾತ್ಮ ಬೊಮ್ಮಗೊಂಡೇಶ್ವರರು ತಮ್ಮ ಜೀವನದಲ್ಲಿ ಅನೇಕ ಕಷ್ಟ ಸಂಕಷ್ಟಗಳನ್ನುಎದುರಿಸಿದರೂಧೈರ್ಯಕಳೆದುಕೊಳ್ಳದೆ,ಕಾಯಕದಲ್ಲಿಯೇ ದೇವರನ್ನು ಕಂಡು ಶ್ರಮ, ಪ್ರಾಮಾಣಿಕತೆ ಹಾಗೂ ನಿಸ್ವಾರ್ಥ ಸೇವೆಯ ಮೂಲಕ ಬದುಕಿದ ಅಪರೂಪದ ಮಹನೀಯರಾಗಿದ್ದಾರೆ. ಸಮಾಜದ ಒಳಿತನ್ನೇ ಬಯಸಿದ ಅವರ ಆದರ್ಶ ಜೀವನ ಇಂದಿನ ಪೀಳಿಗೆಗೆ ದಾರಿದೀಪವಾಗಿದೆ ಎಂದು ಹೇಳಿದರು.ಸಮಾಜದ ಯುವ ಮುಖಂಡ ದೀಪಕ್ ಚಿದ್ರಿ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತನು, ಮನ ಮತ್ತು ಧನದಿಂದ ಸಹಕಾರ ನೀಡುವುದು ಅತ್ಯವಶ್ಯಕವಾಗಿದೆ. ಶಿಕ್ಷಣಕ್ಕೆ ಆದ್ಯತೆ ನೀಡಿ ಸಮಾಜದ ಯುವಕರು ಮುಖ್ಯವಾಹಿನಿಗೆ ಬರಬೇಕು. ಸಮಾಜದಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಪ್ರತಿ ತಿಂಗಳು ಆಯೋಜಿಸುತ್ತಿರುವ ಜಿಲ್ಲಾ ಗೊಂಡ ವಿದ್ಯಾರ್ಥಿಗಳ ಸಂಘದ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೀದರ ಗಾಂಧಿಗಂಜ್ ಕನಕ ಭವನದ ಅಧ್ಯಕ್ಷ ನಾಗರಾಜ್ ನಂದಗಾಂವ್ ವಹಿಸಿದ್ದರು. ಕರವೇ ಜಿಲ್ಲಾ ಸಂಚಾಲಕ ಬಸವರಾಜ್ ನಂದಗಾಂವ್, ಹಿರಿಯ ಮುಖಂಡ ಭೀಮ್ ಸಿಂಗ್ ಮಲ್ಕಾಪುರೆ, ಸುರೇಶ್ ಹುಗೇರಿ, ಜಯ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ರಮೇಶ್ ಮೇತ್ರೆ ಸೇರಿದಂತೆ ಹಲವರು ಮಾತನಾಡಿ ಮಹಾತ್ಮ ಬೊಮ್ಮಗೊಂಡೇಶ್ವರರ ಆದರ್ಶಗಳನ್ನು ಸ್ಮರಿಸಿದರು.

ಆರಂಭದಲ್ಲಿ ಜಿಲ್ಲಾ ಗೊಂಡ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಸಂತೋಷಕುಮಾರ್ ಜೋಳದಾಪಕೆ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಜಯಕುಮಾರ್ ಬ್ಯಾಲಹಳ್ಳಿ ಸ್ವಾಗತಿಸಿದರು. ಮಲ್ಲಿಕಾರ್ಜುನ ಮುರ್ಕೆ ಕಾರ್ಯಕ್ರಮ ನಿರೂಪಿಸಿ, ಸಿದ್ದು ಬಾವಗಿ ವಂದಿಸಿದರು. ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ರೇವಣಪ್ಪ ಮೂಲಗೆ, ಮಲ್ಲಿಕಾರ್ಜುನ ಮಲ್ಕಾಪೂರೆ, ಮನೋಹರ ಹುಪಳಾ, ಮಲ್ಲಿಕಾರ್ಜುನ ಪಾಟೀಲ್ ಹಾಗೂ ಕೃಷ್ಣರಾಜ ಅವರು ಜಾನಪದ ಮತ್ತು ಭಕ್ತಿ ಗೀತೆಗಳನ್ನು ಪ್ರಸ್ತುತಪಡಿಸಿ ಸಭಿಕರನ್ನು ರಂಜಿಸಿದರು.

ಈ ಸಂದರ್ಭದಲ್ಲಿ ಕಲ್ಲಪ್ಪ ರಾಯಗೊಂಡ, ಸುನಿಲ್ ಚಿಲ್ಲರ್ಗಿ, ಮುರಳಿನಾಥ್ ಮೇತ್ರಿ, ಪಂಡರಿ ಜಮಾದಾರ್, ತುಕಾರಾಮ ನೀಲಮ್ಮನಳ್ಳಿ, ಅಶೋಕ್ ನೆಮ್ತಾಬಾದ್, ಆನಂದ್ ಎಖೆಳ್ಳಿಕರ್, ಕಲ್ಲಪ್ಪ ಶಾಪುರ್, ಶಿವಶಂಕರ ನೀಲಮ್ಮನಳ್ಳಿ, ಆತ್ಮಾನಂದ ಬೊಂಬುಳಗಿ ಸೇರಿದಂತೆ ಗೊಂಡ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷರು, ಪದಾಧಿಕಾರಿಗಳು, ಸಮಾಜದ ಹಿರಿಯರು, ಯುವಕರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಬಸವಾದಿ ಶರಣರ ಬೃಹತ್ ಹಿಂದೂ ಸಮಾವೇಶ: ಹಿಂದೂ ಏಕತೆ, ಬಸವ ತತ್ವ ಹಾಗೂ ಸರ್ಕಾರದ ವಿರುದ್ಧ ಟೀಕೆ



ಬೀದರ್: ನಗರದ ಅಕ್ಕಮಹಾದೇವಿ ಕಾಲೇಜು ಆವರಣದಲ್ಲಿ ಭಾನುವಾರ ನಡೆದ ಬಸವಾದಿ ಶರಣರ ಬೃಹತ್ ಹಿಂದೂ ಸಮಾವೇಶದಲ್ಲಿ ವಿವಿಧ ಮಠಾಧೀಶರು, ಸ್ವಾಮೀಜಿಗಳು ಹಾಗೂ ಗಣ್ಯರು ಭಾಗವಹಿಸಿ ಹಿಂದೂ ಏಕತೆ, ಬಸವ ತತ್ವ, ಧಾರ್ಮಿಕ ಸ್ವಾತಂತ್ರ ಮತ್ತು ಸಮಕಾಲೀನ ಸಾಮಾಜಿಕ ವಿಚಾರಗಳ ಕುರಿತು ಅಭಿಪ್ರಾಯ ವ್ಯಕ್ತಪಡಿಸಿದರು.

ಸಮಾವೇಶದಲ್ಲಿ ಮಾತನಾಡಿದ ವಕ್ತಾರರು, ಬಸವಣ್ಣನವರು ದಯೆಯನ್ನು ಧರ್ಮದ ಮೂಲವೆಂದು ಪ್ರತಿಪಾದಿಸಿದ್ದು, ಎಲ್ಲರ ಮೇಲೂ ಪ್ರೀತಿ ಮತ್ತು ಸಹಿಷ್ಣುತೆ ಇರಬೇಕೆಂದು ತಿಳಿಸಿದರು. ಬಸವಣ್ಣನವರ ವಿಚಾರಧಾರೆ ಯಾರೊಬ್ಬರ ಸ್ವತ್ತಲ್ಲ ಎಂದು ಹೇಳಿದ ಅವರು, ಅಧ್ಯಯನ ಮತ್ತು ಸಂಶೋಧನೆ ಇಲ್ಲದೆ ಬಸವ ತತ್ವದ ಕುರಿತು ತಪ್ಪು ಕಲ್ಪನೆಗಳನ್ನು ಹರಡುವವರನ್ನು ನಂಬಬಾರದು ಎಂದು ಹೇಳಿದರು.

ಬಸವಣ್ಣನವರ ಪರುಷಕಟ್ಟೆ ಅಭಿವೃದ್ಧಿಗೆ ಕೋಟ್ಯಂತರ ರೂಪಾಯಿ ಮಂಜೂರಾದರೂ ಸಮರ್ಪಕ ಕೆಲಸ ಆಗಿಲ್ಲ ಎಂದು ಆರೋಪಿಸಿದ ಅವರು, ಲಿಂಗಾಯತ ಸಮಾಜದ ವಿವಿಧ ಚಿಂತನೆಗಳ ನಡುವೆ ಪರಸ್ಪರ ಗೌರವ ಇರಬೇಕು ಹಾಗೂ ಯಾರೂ ತಮ್ಮ ವಿಚಾರಗಳನ್ನು ಮತ್ತೊಬ್ಬರ ಮೇಲೆ ಹೇರಬಾರದು ಎಂದು ಅಭಿಪ್ರಾಯಪಟ್ಟರು.

ಆಂದೋಲಾ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ರಾಜ್ಯ ಸರ್ಕಾರವು ಕನೇರಿ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಅವರ ಭಾಷಣಕ್ಕೆ ಅಡ್ಡಿಪಡಿಸುವ ಪ್ರಯತ್ನ ನಡೆಸಿದೆ ಎಂದು ಆರೋಪಿಸಿದರು. ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುವವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಟೀಕಿಸಿದ ಅವರು, ಹಿಂದೂ ಸಮಾಜವನ್ನು ಕೆಣಕುವ ಪ್ರವೃತ್ತಿಯನ್ನು ತಡೆಯಬೇಕೆಂದು ಹೇಳಿದರು.ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ಗುಂಡುರೆಡ್ಡಿ ಕಮಲಾಪುರೆ ಮಾತನಾಡಿ, ಕನೇರಿ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಅವರ ನೇತೃತ್ವದಲ್ಲಿ ಇಷ್ಟೊಂದು ಮಠಾಧೀಶರು ಒಂದೇ ವೇದಿಕೆಯಲ್ಲಿ ಸೇರುವುದು 12ನೇ ಶತಮಾನದ ಅನುಭವ ಮಂಟಪವನ್ನು ನೆನಪಿಸುವಂತಿದೆ ಎಂದರು. ಜಾತಿ, ಪಂಥ ಭೇದ ಮೀರಿದ ಹಿಂದೂ ಏಕತೆ ಅಗತ್ಯ ಎಂದು ಅವರು ತಿಳಿಸಿದರು.

ಮುಚಳಂಬದ ಪ್ರಣವಾನಂದ ಸ್ವಾಮೀಜಿ ಮಾತನಾಡಿ, ಬಸವಣ್ಣನವರು ವೇದಗಳಲ್ಲಿನ ಎಲ್ಲ ವಿಚಾರಗಳನ್ನು ಖಂಡಿಸಿಲ್ಲ ಎಂದು ಹೇಳಿ, ವೈಚಾರಿಕತೆ ಬೆಳೆಸಿಕೊಳ್ಳುವ ಜೊತೆಗೆ ಧರ್ಮ ಮತ್ತು ಸಂಸ್ಕೃತಿಯ ಗೌರವ ಕಾಪಾಡಬೇಕೆಂದು ಕರೆ ನೀಡಿದರು.

ಬೀದರ್ ಚಿದಂಬರ ಆಶ್ರಮದ ಶಿವಕುಮಾರ ಸ್ವಾಮೀಜಿ ಮಾತನಾಡಿ, ಭಾರತೀಯರಲ್ಲಿನ ಐಕ್ಯತೆಯ ಕೊರತೆಯಿಂದಲೇ ವಿದೇಶಿ ಆಳ್ವಿಕೆ ಸಾಧ್ಯವಾಯಿತು ಎಂದು ಹೇಳಿ, ಮತ್ತೆ ಅಂತಹ ಪರಿಸ್ಥಿತಿ ನಿರ್ಮಾಣವಾಗದಂತೆ ಎಲ್ಲರೂ ಒಗ್ಗಟ್ಟಿನಿಂದ ಇರಬೇಕೆಂದು ಸಲಹೆ ನೀಡಿದರು.ಕನೇರಿ ಸ್ವಾಮೀಜಿ ಮೌನ

ಸಮಾವೇಶದ ನೇತೃತ್ವ ವಹಿಸಿದ್ದ ಕನೇರಿ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಅವರು ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಭಾಷಣ ಮಾಡದೆ ಮೌನವಾಗಿದ್ದರು. ಕಾರ್ಯಕ್ರಮದ ಅವಧಿಯಲ್ಲಿ ವೇದಿಕೆಯ ಚಟುವಟಿಕೆಗಳನ್ನು ವೀಕ್ಷಿಸಿದ ಅವರು, ಅನೇಕ ಭಕ್ತರು ಹಾಗೂ ಮುಖಂಡರಿಂದ ಸನ್ಮಾನ ಸ್ವೀಕರಿಸಿದರು. ಕಾರ್ಯಕ್ರಮಕ್ಕೂ ಮುನ್ನ ಅವರು ನಗರದ ವಿವಿಧ ಶರಣ ಸ್ಥಳಗಳಿಗೆ ಭೇಟಿ ನೀಡಿದ್ದರು.

ಬಿಜೆಪಿ ಶಾಸಕರ ಹಾಜರಿ

ಕಾರ್ಯಕ್ರಮದಲ್ಲಿ ಬಿಜೆಪಿ ಶಾಸಕರಾದ ಡಾ. ಸಿದ್ದಲಿಂಗಪ್ಪ ಪಾಟೀಲ (ಹುಮನಾಬಾದ್), ಡಾ. ಶೈಲೇಂದ್ರ ಬೆಲ್ದಾಳೆ (ಬೀದರ್) ಹಾಗೂ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಪಾಟೀಲ ಉಪಸ್ಥಿತರಿದ್ದು ಕನೇರಿ ಸ್ವಾಮೀಜಿ ಅವರನ್ನು ಸನ್ಮಾನಿಸಿದರು. ವಿವಿಧ ರಾಜಕೀಯ ಪಕ್ಷಗಳ ಮುಖಂಡರೂ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಜನಸಾಗರ

ನಿಗದಿತ ಸಮಯಕ್ಕೆ ಆರಂಭವಾದ ಸಮಾವೇಶದಲ್ಲಿ ಸಾವಿರಾರು ಭಕ್ತರು ಭಾಗವಹಿಸಿದ್ದರು. ಅಕ್ಕಮಹಾದೇವಿ ಕಾಲೇಜು ಆವರಣ ಜನರಿಂದ ಕಿಕ್ಕಿರಿದು ತುಂಬಿದ್ದು, ವೇದಿಕೆಯ ಮೇಲೆ 300ಕ್ಕೂ ಅಧಿಕ ಮಠಾಧೀಶರು ಮತ್ತು ಸ್ವಾಮೀಜಿಗಳು ಆಸೀನರಾಗಿದ್ದರು. ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಆಸನ ವ್ಯವಸ್ಥೆ ಕಲ್ಪಿಸಲಾಗಿತ್ತು. ಭಾಗವಹಿಸಿದ್ದವರು ಭಗವಾ ಪಟ್ಟಿಗಳನ್ನು ಧರಿಸಿ, ಧ್ವಜಗಳನ್ನು ಹಿಡಿದು ಜೈ ಶ್ರೀರಾಮ್, ಬಸವಾದಿ ಶರಣರಿಗೆ ಜಯವಾಗಲಿ ಹಾಗೂ ಹಿಂದೂ ಧರ್ಮಕ್ಕೆ ಜಯವಾಗಲಿ ಎಂಬ ಘೋಷಣೆಗಳನ್ನು ಕೂಗಿದರು. ಪೊಲೀಸ್ ಇಲಾಖೆಯಿಂದ ಬಿಗಿ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿತ್ತು.



## ಬಿ.ಎಂ.ಪಾಟೀಲ್ ಪಬ್ಲಿಕ್ ಶಾಲೆಯಲ್ಲಿ ವಿಶ್ವ ತಾಯಂದಿರ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಜಲನಗರದಲ್ಲಿರುವ ಬಿ. ಎಂ. ಪಾಟೀಲ್ ಪಬ್ಲಿಕ್ ಶಾಲೆಯಲ್ಲಿ ವಿಶ್ವ ತಾಯಂದಿರ ದಿನ ಆಚರಿಸಲಾಯಿತು.

ಮಂಗಳವಾರ ನಡೆದ ಕಾರ್ಯಕ್ರಮಕ್ಕೆ ಶಾಲೆಯ ಪ್ರಾಚಾರ್ಯ ವಿಕ್ರಂ ನಾವೆಣಟಿಜಜಜಿಟಿಜರ್ಜಕರ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು ಪ್ರತಿಯೊಬ್ಬರ ಯಶಸ್ಸಿನ ಹಿಂದೆ ತಾಯಿ ಆಶೀರ್ವಾದ, ಪ್ರೋತ್ಸಾಹ, ಪರಿಶ್ರಮ, ತ್ಯಾಗ ಅಡಗಿರುತ್ತದೆ. ಆದ್ದ-ರಿಂದ ಇಂಥ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ತಾಯಿಯನ್ನು ಗೌರವಿಸಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತಾಯಂದಿರಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿ-ತ್ತು. ಮಕ್ಕಳ ಮನೋರಂಜನೆ ಮತ್ತು ನಾನಾ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು. ಈ ಸಂದರ್ಭದಲ್ಲಿ ಶಾಲೆಯ ಹಿರಿಯ ಸಂಯೋಜಕಿ ಜಯಾ ಗಲಗಲಿ, ಬೋಧಕ, ಬೋಧಕರ ಹೊರತಾದ ಸಿಬ್ಬಂದಿ, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಹಿರಿಯ ನಾಗರಿಕರ ಮೇಲಿನ ದೌರ್ಜನ್ಯ ತಡೆ & ಜಾಗೃತಿ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಬಿ. ಎಲ್. ಡಿ. ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಹಿರಿಯ ನಾಗರಿಕರ ವೈದ್ಯಕೀಯ ವಿಭಾಗದ ವತಿಯಿಂದ ಬುಧವಾರ ಹಿರಿಯ ನಾಗರಿಕರ ಮೇಲಿನ ದೌರ್ಜನ್ಯ ತಡೆ ಮತ್ತು ಜಾಗೃತಿ ಕುರಿತು ಕಾರ್ಯಕ್ರಮವನ್ನು ನಡೆಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ವಿಜಯಪುರ ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿ ಜಗದೀಶ ಕೆ. ಮಾತನಾಡಿ, ಹಿರಿಯ ನಾಗರಿಕರ ಮೇಲಿನ ದೌರ್ಜನ್ಯಕ್ಕೆ ಒಳಗಾದವ-ರಿಗೆ ಸರಕಾರದಿಂದ ಲಭ್ಯವಿರುವ ನಾನಾ ನೆರವು ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಕುಟುಂಬದಲ್ಲಿ ದೌರ್ಜನ್ಯವನ್ನು ತಡೆಗಟ್ಟಲು ಹೊಸ ತಲೆಮಾರಿನೊಂದಿಗೆ ಹೊಂದಾಣಿಕೆ ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಮಕ್ಕಳ ಸಣ್ಣಪುಟ್ಟ ತಪ್ಪುಗಳನ್ನು ಕ್ಷಮಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಕುಟುಂಬದಲ್ಲಿ ಸೌಹಾರ್ದಯುತ ವಾತಾವರಣ ನಿರ್ಮಿಸಬೇಕು ಮತ್ತು ಪರಸ್ಪರ ಸಹಕಾರದಿಂದ ಕುಟುಂಬವನ್ನು ಸದೃಢವಾಗಿರಿಸಬೇಕು ಎಂದು ಅವರು ಸಲಹೆ ನೀಡಿದರು.

ಬಿ.ಎಲ್.ಡಿ.ಇ ಡೀಮ್ಡ್ ವಿವಿ ಕಾನೂನು ಶಾಲೆಯ ಪ್ರಾಚಾರ್ಯ ಡಾ. ರಘುವೀರ ಕುಲಕರ್ಣಿ ಮಾತನಾಡಿ, ಹಿರಿಯ ನಾಗರಿಕರ ಹಕ್ಕುಗಳು ಮತ್ತು ಅವರ ರಕ್ಷಣೆಗಾಗಿ ಜಾರಿಯಲ್ಲಿರುವ ನಾನಾ ಕಾನೂನುಗಳ ಕುರಿತು ಮಾಹಿತಿ ನೀಡಿದರು.

ಹಿರಿಯರು ತಮ್ಮ ಇಚ್ಛಾಪತ್ರವನ್ನು ಸೂಕ್ತವಾಗಿ ರಚಿಸಿ ಸುರಕ್ಷಿತವಾಗಿ ಇಡಬೇಕು. ಜೀವಿತಾವಧಿಯಲ್ಲಿಯೇ ತಮ್ಮ ಆಸ್ತಿಯನ್ನು ಮಕ್ಕಳ ಹೆಸರಿಗೆ ವರ್ಗಾಯಿಸದಿರುವುದು ಒಳಿತು ಎಂದು ಅವರುಸಲಹೆ ನೀಡಿದರು.

ಬಿ.ಎಲ್.ಡಿ.ಇ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಸಂಜೀವ ಬೆಂಟೂರ ಮಾತನಾಡಿ, ಹಿರಿಯ ನಾಗರಿಕರಿಗೆ ಆಸ್ಪತ್ರೆಯಲ್ಲಿ ಅಗತ್ಯವಿರುವ ಎಲ್ಲಾ ರೀತಿಯ ವೈದ್ಯಕೀಯ ಮತ್ತು ಸಲಹಾ ಸೇವೆಗಳನ್ನು ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಹಿರಿಯ ನಾಗರಿಕರ ವೈದ್ಯಕೀಯ ವಿಭಾಗದ ಪ್ರಾಧ್ಯಾಪಕ ಮತ್ತು ವಿಭಾಗದ ಮುಖ್ಯಸ್ಥ ಡಾ. ಆನಂದ ಪಿ. ಅಂಬಲಿ ಮಾತನಾಡಿ, ಹಿರಿಯರ ಮೇಲಿನ ದೌರ್ಜನ್ಯವು ಅವರ ಮಾನಸಿಕ ಆರೋಗ್ಯದ ಮೇಲೆ ಬೀರುವ ದುಷ್ಪ-ರಿಣಾಮಗಳ ಕುರಿತು ವಿವರಿಸಿದರು.

ದೌರ್ಜನ್ಯಕ್ಕೆ ಒಳಗಾದ ಹಿರಿಯರಿಗೆ ವೃದ್ಧಾಪ್ಯದ ವೈದ್ಯಕೀಯ ವಿಭಾಗದಲ್ಲಿ ವೈದ್ಯಕೀಯ ಚಿಕಿತ್ಸೆ, ಮಾನಸಿಕ ಆರೋಗ್ಯ ಸಲಹೆ ಮತ್ತು ಅಗತ್ಯ ಮಾರ್ಗದರ್ಶನವನ್ನು ನಿರಂತರವಾಗಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಹಿರಿಯ ನಾಗ-ರಿಕರು, ದೌರ್ಜನ್ಯಕ್ಕೆ ಒಳಗಾಗುವ ಹಿರಿಯರಿಗೆ ನೆರವಾಗುವ ವಿಶೇಷ ಕೇಂದ್ರವನ್ನು ಸ್ಥಾಪಿಸಬೇಕು. ಹಿರಿಯರು ಹಾಗೂ ಮೊಮ್ಮಕ್ಕಳು ಆಧ್ಯಾತ್ಮಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು, ಮೊಮ್ಮಕ್ಕಳೊಂದಿಗೆ ಆತ್ಮೀಯ ಬಾಂಧವ್ಯ ಬೆಳೆಸಿಕೊಳ್ಳುವುದು, ಸೊಸೆಯೊಂದಿಗೆ ಹೊಂದಾಣಿಕೆಯಿಂದ ವರ್ತಿಸುವುದು ಹಾಗೂ ಮನೆಯ ದೈನಂದಿನ ಕಾರ್ಯಗಳಲ್ಲಿ ಕುಟುಂಬ ಸದಸ್ಯರಿಗೆ ಸಹಕ-ರಿಸುವುದರಿಂದ ಕುಟುಂಬದಲ್ಲಿ ಸಂತೋಷ, ಸಾಮರಸ್ಯ ಮತ್ತು ಆರೋಗ್ಯಕರ ವಾತಾವರಣ ನಿರ್ಮಾಣವಾಗುತ್ತದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ನಾಗರಿಕರ ಮೇಲಿನ ದೌರ್ಜನ್ಯ ಕುರಿತು ಆಯೋಜಿಸಿದ್ದ ಪೋಸ್ಟರ್ ಸ್ಪರ್ಧೆಯಲ್ಲಿ ವಿಜೇತರಾದ ಎಂ. ಕೆ. ಹಿರ್ಯಾಳ, ಅನುಪಮಾ ಸಿನ್ಹಾ, ಅಂಜಲಿ ವರ್ಮಾ ಹಾಗೂ ದಾನಮ್ಮ ಅರಳಿ ಅವರನ್ನು ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರು, ವೈದ್ಯರು, ಬೋಧಕ ವರ್ಗದ ಸದಸ್ಯರು, ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಮುಂಗಾರು ಹಂಗಾಮಿನ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ಜಾರಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ವಿಜಯಪುರ ಜಿಲ್ಲೆಗೆ ದಾಳಿಂಬೆ, ಲಿಂಬೆ ಹಾಗೂ ದ್ರಾಕ್ಷಿ ಬೆಳೆಗಳಿಗೆ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯನ್ನು ಆರ್‌ಡಬ್ಲೂಬಿಸಿಐ-ಎಸ್ ಅನುಷ್ಠಾನಗೊಳಿಸಲು ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ತಿಳಿಸಿದ್ದಾರೆ.

ಬೆಳೆ ವಿಮೆ ಯೋಜನೆಯು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು, ಜಿಲ್ಲೆಯ ದಾಳಿಂಬೆ, ಲಿಂಬೆ ಮತ್ತು ದ್ರಾಕ್ಷಿ ಬೆಳೆಗಾರರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು.

ಈ ಯೋಜನೆಯಡಿ ವಿಮೆಗೆ ಒಳಪಡುವ ನಿಗದಿತ ಬೆಳೆಯನ್ನು ಬೆಳೆಯದೆಯೇ, ತಪ್ಪು ಮಾಹಿತಿ ನೀಡಿ ವಿಮೆ ಯೋಜನೆಗೆ ನೋಂದಾಯಿಸಿಕೊಳ್ಳುವುದು ಕಾನೂನುಬಾಹಿರವಾಗಿದೆ. ಒಂದು ವೇಳೆ ಬೆಳೆಯನ್ನು ಬೆಳೆಯದೇ ವಿಮೆ ಯೋಜನೆಯಡಿ ನೋಂದಾಯಿಸಿಕೊಂಡಿರುವುದು ಕಂಡುಬಂದಲ್ಲಿ, ಅಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ಆದ್ದರಿಂದ, ರೈತರು ನಿಖರವಾದ ಮಾಹಿತಿ ನೀಡಿ, ಈ ಯೋಜನೆಯ ಸದುಪಯೋಗಪಡೆದುಕೊಳ್ಳುವಂತೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಗಾಂಧಿ ಭವನದಲ್ಲಿ ಇಂದು ಪತ್ರಿಕಾ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಮಾಧ್ಯಮ ಅಕಾಡೆಮಿ, ವಾರ್ತಾ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲೂಣಟಿಜಜ-ಜಿಟಿಜಜಜೆ) ಸಂಯುಕ್ತ ಆಶ್ರಯದಲ್ಲಿ ಜು.1 ರಂದು ಪತ್ರಿಕಾ ದಿನಾಚರಣೆಯನ್ನು ಗಾಂಧಿ ಭವನದಲ್ಲಿ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆ ಹಾಗೂ ಅಕಾಡೆಮಿಯ ವಾರ್ಷಿಕ ವರದಿ ಬಿಡುಗಡೆಯನ್ನು ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ನೆರವೇರಿಸಲಿದ್ದಾರೆ. ಸಂಸದ ಪಿ.ಸಿ. ಮೋಹನ್ ಹಾಗೂ ತೆಲಂಗಾಣ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಕೆ.ಶ್ರೀನಿವಾಸ ರೆಡ್ಡಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಗಾಂಧಿ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ದಿನೇಶ್ ಗುಂಡೂರಾವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.ಪತ್ರಿಕಾ ದಿನಾಚರಣೆಯ ಅಂಗವಾಗಿ ಡಿಜಿಟಲ್ ಯುಗದಲ್ಲಿ ನಿಜ ಪತ್ರಕರ್ತರು ಯಾರು? ಎಂಬ ವಿಷಯದ ಕುರಿತು ವಿಶೇಷ ವಿಚಾರ ಸಂಕಿರಣ ಆಯೋಜಿಸಲಾಗಿದೆ. 'ವಾರ್ತಾ ಭಾರತಿ'ಯ ಹಿರಿಯ ಪತ್ರಕರ್ತರಾದ ಅಬ್ದುಸ್ಸಲಾಂ ಪುತ್ತಿಗೆ ಅವರು ಪ್ರಧಾನ ಭಾಷಣ ಮಾಡಲಿದ್ದಾರೆ.

# ವಿಕಲಚೇತನರಿಗೆ ತ್ರಿಚಕ್ರ ವಾಹನ ವಿತರಿಸಿದ ಶಾಸಕ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ವಿಕಲಚೇತನರು ಸಮಾಜದಲ್ಲಿ ಮುಕ್ತವಾಗಿ ಸಂಚರಿಸಲು ಅವರಿಗೆ ತ್ರಿಚಕ್ರ ವಾಹನ ನೀಡುತ್ತಿರುವುದು ಶ್ಲಾಘನೀಯ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತನ್ 2025-26ನೆಯ ಸಾಲಿನ ತಾಪಂ ಅನಿರ್ಬಂಧಿತ ಅನುದಾನದಡಿಯಲ್ಲಿ ಅರ್ಹ 6 ವಿಕಲಚೇತನ ಪಲಾನುಭವಿಗಳಿಗೆ ಇಂಧನ ಜಾಲಿತ ತ್ರಿಕಚ್ರ ವಾಹನವನ್ನು ವಿತರಿಸಿ ಮಾತನಾಡಿದ ಅವರು, ವಿಕಲಚೇತನರು ಸಮಾಜದಲ್ಲಿ ಸಮಾನವಾಗಿ ಪ್ರಗತಿ ಸಾಧಿಸಲು ಅವರಿಗೆ ಸರಕಾರದಿಂದ ಸಿಗಬೇಕಾದ ಸೌಕರ್ಯಗಳನ್ನು ಅತ್ಯಂತ ಪ್ರಮಾಣಿಕವಾಗಿ ಅರ್ಹರಿಗೆ ತಲುಪುವಂತಾಗಬೇಕು. ಜೊತೆಗೆ ತ್ವರಿತ ಗತಿಯಲ್ಲಿ ಒದಗಿಸಬೇಕು. ಸಮಾಜದಲ್ಲಿ ವಿಕಲಚೇತನರು ಸ್ವಾವಲಂಬಿಗಳಾಗಿ ಬದುಕಬೇಕು. ಉದ್ಯೋಗಕ್ಕಾಗಿ ಮತ್ತು ಮತ್ತಿತರ ವ್ಯವಸ್ಥೆಗಳಿಗೆ ಬೇರೆಯವರನ್ನು ಆಶ್ರಯಿಸಬೇಕಾದ ಅನಿವಾರ್ಯತೆ ಇದೆ. ಆ ಕಾರಣಕ್ಕೆ ಅವರ ಬದುಕಿಗೆ ಚೈತನ್ಯ ನೀಡಲು ಮತ್ತು ಉಳಿದವರಿಗಿಂತ ನಾವೇನೂ ಕಡಿಮೆ ಇಲ್ಲ ಎಂದು ಸಾಧಿಸಿ ತೋರಿಸಲು ಸರಕಾರ ಸಹಕಾರ ನೀಡುತ್ತದೆ. ಇದರ ಸದುಪಯೋಗವನ್ನು ಎಲ್ಲರೂ ಪಡೆಯಬೇಕು ಎಂದರು. ಈ ವೇಳೆ ತಾಪಂ ಇಒ ರಾಮು ಅಗ್ನಿ, ಅಕ್ಷರ ದಾಸೋಹ ಅಧಿಕಾರಿ ಅರವಿಂದ ಡೋಣೂರ, ಜೋಗುರ ಮೋಟರ್ಸ್ ಮಾಲೀಕರಾದ ರಮೇಶ ಜೋಗುರ, ಉಮೇಶ ಜೋಗುರ, ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಕೋಳಾರಿ, ಸಂತೋಷ ಸಾಲಿ, ಸುನಂದಾ ಯಂಪುರೆ, ಮಹಾನಂದ ಬಮ್ಮಣ್ಣಿ, ಮುತ್ತು ಸಾತಿಹಾಳ, ಶಾಂತು ರಾಣಾಗೋಳ, ಮೋಶಿನ್ ಬೀಳಗಿ, ಶಿವಾನಂದ ಹಡಪದ, ಐಇಸಿ ನರೇಗಾ ಸಂಯೋಜಕ ಭೀಮರಾಯ ಚೌಧರಿ, ರಮೇಶ ನಡುವಿನಕೇರಿ, ಪ್ರಕಾಶ ಹೊಸಮನಿ ಸೇರಿದಂತೆ ಫಲಾನುಭವಿಗಳು, ಇಲಾಖೆ ಸಿಬ್ಬಂದಿಗಳು, ಪಕ್ಷದ ಕಾರ್ಯಕರ್ತರು ಹಾಗೂ ಇತರರು ಇದ್ದರು.

### ಪಂಚಮಸಾಲಿ ಸಮಾಜಕ್ಕೆ ಕಾಂಗ್ರೆಸ್ ಸರ್ಕಾರದಿಂದ ನಿರಂತರ ಅನ್ಯಾಯ | ಸಮಾಜ ಮುಖಂಡರಿಂದ ಸುದ್ದಿಗೋಷ್ಠಿ

# ಪಂಚಮಸಾಲಿ ಸಮಾಜಕ್ಕೆ ನ್ಯಾಯ ಒದಗಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪಂಚಮಸಾಲಿ ಸಮಾಜದ ರಾಜು ಕಾಗೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಹಾಗೂ ಐದು ಜನ ಪಂಚಮಸಾಲಿ ಸಮಾಜದ ಶಾಸಕರಿಗೆ ಸಚಿವ ಸ್ಥಾನ ನೀಡುವಂತೆ ಪಂಚಮಸಾಲಿ ಸಮಾಜದ ಮುಖಂಡ ಸುರೇಶ ಶಂಕರಗೌಡ ಬಿರಾದಾರ ಒತ್ತಾಯಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂಚಮಸಾಲಿ ಸಮಾಜ ತ್ಯಾಗ, ಶೈಕ್ಷಣಿಕ ಸೇವೆ, ಅಧ್ಯಾತ್ಮಿಕತೆಗೆ ಹೆಸರುವಾಸಿಯಾಗಿದೆ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವಲ್ಲಿ ಪಂಚಮಸಾಲಿ ಸಮಾಜದ ಪಾತ್ರ ಪ್ರಮುಖವಾಗಿದೆ, ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರ ಪಂಚಮಸಾಲಿ ಸಮಾಜಕ್ಕೆ ಸೂಕ್ತವಾದ ಪ್ರಾತಿನಿಧ್ಯ ನೀಡುವಲ್ಲಿ ವಿಫಲವಾಗಿದೆ, ಈ ಸರ್ಕಾರ ಪಂಚಮಸಾಲಿ ಸಮಾಜದ ಋಣದಲ್ಲಿದೆ, ಅದನ್ನು ಕಾಂಗ್ರೆಸ್ ಮರೆಯಬಾರದು, ಹೀಗಾಗಿ ಸಮಾಜ-ಕ್ಕೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು, ಆರು ಬಾರಿ ಶಾಸಕರಾಗಿರುವ ಹಾಗೂ ಜನಪರವಾಗಿ ನಿಷ್ಠೆಯ ಉದಾರಹಣೆಯಾಗಿರುವ ರಾಜು ಕಾಗೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಲೇಬೇಕು, ವಿಜಯಪುರ ಜಿಲ್ಲೆಯಿಂದ ಆಯ್ಕೆಯಾದ, ಹಿರಿಯರಾದ ಶಿವಾನಂದ ಪಾಟೀಲ, ಯುವ ಶಾಸಕ ಅಶೋಕ ಮನಗೂಳಿ, ಬೆಳಗಾವಿಯ ಲಕ್ಷ್ಮಿ ಹೆಬ್ಬಾಳಕರ ಅವರಿಗೆ ಹಾಗೂ ನೆರೆಯ ಬಾಗಲಕೋಟೆ ಜಿಲ್ಲೆಯ ಶಾಸಕ ವಿಜಯಾನಂದ ಕಾಶಪ್ಪನವರ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಹಕ್ಕೊತ್ತಾಯ ಮಂಡಿಸಿದರು.

ನಮ್ಮ ಬೇಡಿಕೆಗಳಿಗೆ ಸ್ಪಂದಿಸದೇ ಇದ್ದರೆ ಮುಂದಿನ ದಿನ ಮಾನಗಳಲ್ಲಿ ಗೃಹ ಇಲಾಖೆ ನಮ್ಮ ಸಮಾಜದ ಹೋರಾಟಕ್ಕೆ ಅನುಮತಿಕೊಟ್ಟರೆ ಇಡಿ ಪಂಚಮಸಾಲಿ ಸಮಾಜ ರಸ್ತೆಗಿಳಿದು ಹೋರಾಟ ಮಾಡಲು ಸಿದ್ದರಿದ್ದೇವೆ. ಹಿಂದೆ 2ಎ ಹೋರಾಟದಲ್ಲಿ ಲಾಠಿ ಚಾರ್ಜ ಮಾಡಿಸಿ ಇಲ್ಲಸಲ್ಲದ ಕೇಸ ಹಾಕಿರುವದು ನಮ್ಮ ಸಮಾಜ ಎಂದೂ ಮರೆಯುವದಿಲ್ಲ ಮತ್ತು ಆ ಗಾಯ ಮನಸ್ಸಿನಿಂದ ಇನ್ನೂ ಮಾಸಿಲ್ಲ. ಈಗಾಗಲೆ ಮೊದಲನೆ ಸಂಪೂಟ ವಿಸ್ತರಣೆಯಲ್ಲಿ ನಮ್ಮ ಸಮಾಜ ಕಡೆಗಣಿಸಿರುವದು, ಕಾಂಗ್ರೆಸ್ ಪಕ್ಷ ದೊಡ್ಡ ಪ್ರಮಾದ ಎಸಗಿದೆ. ಪಂಚಮಸಾಲಿ ಸಮಾಜಕ್ಕೆ ಮಾಡುತ್ತಿರುವ ಪ್ರಮಾದವನ್ನು ಕಾಂಗ್ರೆಸ್ ಸರಿಪಡಿಸಿಕೊಳ್ಳಬೇಕು, ಇಲ್ಲವಾದರೆ 2028 ರ ಚುನಾವಣೆಯಲ್ಲಿ ತಕ್ಕ ಉತ್ತರ ಕೊಡಲಾಗುವದು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶ್ರೀಶೈಲ ಪಾಟೀಲ, ಡಾ. ಶಿವಾನಂದ ರೇಷ್ಮಿ, ಗಣೇಶ ಮಣೂರ ಉಪಸ್ಥಿತರಿದ್ದರು.

## ಪೋಷಕತ್ವ ಯೋಜನೆ: ಸಾಕು ಪೋಷಕರಿಂದ ಅರ್ಜಿ ಆಹ್ವಾನ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಾಲ ನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಅನ್ವಯ, ವಿವಿಧ ಕಾರಣಗಳಿಂದ ಪೋಷಕರ ಆಸರೆಯಿಲ್ಲದ ಮಕ್ಕಳಿಗೆ ತಾತ್ಕಾಲಿಕ ಆರೈಕೆ ನೀಡುವ ಪೋಷಕತ್ವ ಯೋಜನೆಗೆ ವಿಜಯಪುರ ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಅರ್ಹ ಸಾಕು ಪೋಷಕರಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಮಾರಣಾಂತಿಕ ಕಾಯಿಲೆ, ತೀವ್ರ ಅನಾರೋಗ್ಯದಿಂದ ಸಾವು ಅಥವಾ ಇನ್ನಿತರ ಕಾರಣಗಳಿಂದಾಗಿ ಪೋಷಕರ ಆರೈಕೆಯಿಂದ ವಂಚಿತರಾದ ಮಕ್ಕಳನ್ನು ಅವರ ವಿಸ್ತೃತ ಕುಟುಂಬ ಸದಸ್ಯರು ಅಥವಾ ಅಸಂಬಂಧಿತ ವ್ಯಕ್ತಿ ಅಥವಾ ಕುಟುಂಬದಲ್ಲಿ ತಾತ್ಕಾಲಿಕ ಆರೈಕೆ ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಕಾರಣಾಂತರಗಳಿಂದ ದತ್ತು ಸ್ವೀಕಾರಕ್ಕೆ ಒಳಪಡಲು ಸಾಧ್ಯವಿಲ್ಲದ 07 ರಿಂದ 18 ವರ್ಷದೊಳಗಿನ ಮಕ್ಕಳಿಗೆ ತಾತ್ಕಾಲಿಕ ಪೋಷಕರನ್ನು ಒದಗಿಸುವುದು ಈ ಯೋಜನೆಯಡಿ ಸೇರಿದೆ. ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ 2026-27ನೇ ಸಾಲಿನಲ್ಲಿ ಪೋಷಕತ್ವ ಕಾರ್ಯಕ್ರಮದಡಿ ಮಾರ್ಗಸೂಚಿಯಂತೆ ಅರ್ಹತಾ ಸಂಭವನೀಯ ಸಾಕು ಪೋಷಕರು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬಿ4/3, ವಿವೇಕ ನಗರ ಪಶ್ಚಿಮ, ವಿಜಯಪುರ ಕಚೇರಿಯನ್ನು ಖುದ್ದಾಗಿ ಅಥವಾ ಕಚೇರಿ ದೂರವಾಣಿ ಸಂಖ್ಯೆ 08352-295261 ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದು ವಿಜಯಪುರ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ಕಿತ್ತೂರ ರಾಣಿ ಚನ್ನಮ್ಮ ವಿವಿ ಸ್ನಾತಕೋತ್ತರ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026-27ನೇ ಶೈಕ್ಷಣಿಕ ಸಾಲಿನ ಕಿತ್ತೂರ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿಯ ಮುಖ್ಯ ಆವರಣದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಸ್ನಾತಕೋತ್ತರ ಕೇಂದ್ರ ವಿಜಯಪುರ, ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯ, ಬೆಳಗಾವಿ ಹಾಗೂ ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳ ಸಂಂ-ಯೋಜಿತ ಮಹಾವಿದ್ಯಾಲಯಗಳಲ್ಲಿ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ರಾಜ್ಯ ಸರ್ಕಾರದ ಯು.ಯು.ಸಿ. ಎಂ.ಎಸ್. ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲ್ಲು ಜುಲೈ 20 ಕೊನೆಯ ದಿನಾಂಕವಾಗಿದೆ.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಬಳಿಕ ಅದರ ಒಂದು ಮುದ್ರಿತ ಪ್ರತಿಯೊಂದಿಗೆ ಅಗತ್ಯ ದಾಖಲೆಗಳನ್ನು ಸಂಬಂಧಿತ ವಿಭಾಗ ಅಥವಾ ಕೇಂದ್ರಕ್ಕೆ ಕಡ್ಡಾಯವಾಗಿ ಸಲ್ಲಿಸಬೇಕು ಎಂದು ವಿಶ್ವವಿದ್ಯಾಲಯ ತಿಳಿಸಿದೆ.

ಸ್ಥಳೀಯ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಆಸಕ್ತಿಯನ್ನು ಗಮನದಲ್ಲಿಟ್ಟುಕೊಂಡು, 2026-27ನೇ ಶೈಕ್ಷಣಿಕ ಸಾಲಿನಿಂದ ವಿಜಯಪುರದ ಸ್ನಾತಕೋತ್ತರ ಕೇಂದ್ರದಲ್ಲಿ ಕನ್ನಡ, ಇಂಗ್ಲಿಷ್, ಇತಿಹಾಸ, ಸಮಾಜಕಾರ್ಯ, ವಾಣಿಜ್ಯಶಾಸ್ತ್ರ ಹಾಗೂ ಎಂ.ಸಿ.ಎ. ಕೋರ್ಸ್‌ಗಳ ಜೊತೆಗೆ ಉರ್ದು, ಮರಾಠಿ, ಗಣಿತಶಾಸ್ತ್ರ, ರಾಜ್ಯಶಾಸ್ತ್ರ ಮತ್ತು ಅರ್ಥ-ಶಾಸ್ತ್ರ ವಿಷಯಗಳನ್ನೂ ಹೊಸದಾಗಿ ಆರಂಭಿಸಲಾಗಿದೆ.

ಇದಲ್ಲದೆ, ವಿಜಯಪುರ ಸ್ನಾತಕೋತ್ತರ ಕೇಂದ್ರದಲ್ಲಿ ಯಾವುದೇ ಸ್ನಾತಕೋತ್ತರ ಕೋರ್ಸ್‌ಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯದ ಮುಖ್ಯ ಆವರಣದ ಪ್ರವೇಶ ಶುಲ್ಕಕ್ಕೆ ಹೋಲಿಸಿದರೆ ಶೇ.30ರಷ್ಟು ಶುಲ್ಕ ರಿಯಾಯಿತಿ ನೀಡಲಾಗುತ್ತಿದೆ.

ಜಿಲ್ಲೆಯ ಸ್ನಾತಕೋತ್ತರ ಕೇಂದ್ರದಲ್ಲಿ ಪ್ರವೇಶ ಬಯಸುವ ವಿದ್ಯಾರ್ಥಿಗಳು ಯು.ಯು.ಸಿ.ಎಂ.ಎಸ್. ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಬಳಿಕ ಅದರ ಪ್ರತಿ, ಅರ್ಜಿ ಶುಲ್ಕ ಪಾವತಿ ರಸೀದಿ ಹಾಗೂ ಅಗತ್ಯ ದಾಖಲೆಗಳ ಪ್ರತಿಗಳನ್ನು "ಸಂಯೋಜಕರು, ಸ್ನಾತಕೋತ್ತರ ಕೇಂದ್ರ, ತೊರವಿ, ವಿಜಯಪುರ" ಕಚೇರಿಗೆ ಸಲ್ಲಿಸಬೇಕು. ಅಂತಹ ವಿದ್ಯಾರ್ಥಿಗಳಿಗೆ ವಿಜಯಪುರ ಸ್ನಾತಕೋತ್ತರ ಕೇಂದ್ರದಲ್ಲಿಯೇ ಪ್ರವೇಶ ಪ್ರಕ್ರಿಯೆ ನಡೆಸಿ ಪ್ರವೇಶ ನೀಡಲಾಗುವುದು.

ಸ್ನಾತಕೋತ್ತರ ಪದವಿ ಪ್ರವೇಶಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣ www.rcub.ac.in ಹಾಗೂ 9110469603, 8088801971 ದೂರವಾಣಿ ಸಂಖ್ಯೆಗಳ ಮೂಲಕ ಮಾಹಿತಿ ಪಡೆಯಬಹುದಾಗಿದೆ.

ವಿದ್ಯಾರ್ಥಿಗಳು ಈ ವಿಶೇಷ ಅವಕಾಶವನ್ನು ಸದುಪಯೋಗಪಡಿಸಿಕೊಂಡು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಕಿತ್ತೂರ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರ ಪ್ರಕಟಣೆ ತಿಳಿಸಿದೆ.

## ಸಾಮಾಜಿಕ ಸಾಮರಸ್ಯ ಬೆಳೆಸುವ ಛಲವಾದಿ ಮಹಾಸಭೆ :ಸುನೀಲ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಛಲವಾದಿ ಮಹಾಸಭಾ ಉದ್ದೇಶ ಸಮಾಜದ ಸರ್ವೋತೋಮುಖ ಅಭಿವೃದ್ಧಿಯೊಂದಿಗೆ ಸಾಮಾಜಿಕ ಸಾಮರಸ್ಯ ಬೆಳೆಸುವ ಮೂಲಕ ಗುಣಾತ್ಮಕ ಸಮಾಜ ಕಟ್ಟುವಲ್ಲಿ ಶ್ರಮಿಸುವ ಸಂಘಟನೆಯಾಗಿದೆ ಎಂದು ಜಿಲ್ಲಾಧ್ಯಕ್ಷ ಸುನೀಲ ಹೊಸಹಳ್ಳಿ ಹೇಳಿದರು.

ಪ್ರವಾಸಿ ಮಂದಿರದಲ್ಲಿ ನೂತನ ಪದಾಧಿಕಾ-ರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಛಲವಾದಿ ಮಹಾಸಭಾ ಕಟ್ಟಿದ ದಿ. ಕೆ.ಶಿವರಾಮ ಅಧಿಕಾರಿಗಳ ಪರಿಕಲ್ಪನೆ ಅನೇಕ ಆಯಾಮಗಳಿಂದ ಕೂಡಿತ್ತು. ಛಲವಾದಿ ಸಮುದಾಯ ಗ್ರಾಮೀಣ ಭಾಗದಲ್ಲಿ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿತ್ತುಇದನ್ನು ಸುಧಾರಣೆಗೆತರಬೇಕು ಎಂಬ ವಿಚಾರಧಾರೆ ಶಿವರಾಮ ಅವರದಾಗಿತ್ತು. ವಿಧಿ ಅವರ ಸಮಾಜ ಮುಖಿ ಕಾರ್ಯ ದೈವಾಧೀನರಾದ ನಂತರ ಇಡೇರಲ್ಲಿಲ್ಲ. ಇಂದು ಅವರ ವಿಚಾರಧಾರೆಯನ್ನೇ ಕೈಗೆತ್ತಿಕೊಂಡ ರಾಜ್ಯ ಸಂಚಾಲಕರಾದ ಶ್ರೀಮತಿ ವಾಣಿ. ಕೆ ಶಿವರಾಂ ರವರು ಸಮಾಜ ಚಿಂತನೆಯಿಂದ ಮತ್ತು ಛಲವಾದಿ ಬಡಮಕ್ಕಳು ಆಯ್,ಎ.ಎಸ್.ಕೆ.ಎ.ಎಸ್ ತರಬೇತಿ ಕಲಿತು ಉನ್ನತ ಹುದ್ದೆ ಅಲಂಕರಿಸಲಿ ಎಂಬ ಸದಾಶಯದೊಂದಿಗೆ ತರಬೇತಿ ಕೇಂದ್ರ ತೆರೆದಿದ್ದಾರೆ ಇದರ ಸದುಪಯೋಗ ಪಡೆಯಬೇಕು. ಛಲವಾದಿ ಮಹಾಸಭಾ ಅಧ್ಯಕ್ಷ ಪದಾಧಿಕಾರಿಗಳು ಗ್ರಾಮೀಣ ಭಾಗ ,ಭೂತ ಮಟ್ಟದಲ್ಲಿ ಛಲವಾದಿ ಮಹಾಸಭಾ ಬೆಳೆಸಿ ಒಳ್ಳೆಯ ಸಂಘಟನೆ ಎಂಬ ಹೆಗ್ಗಳಿಕೆ ಬರುವಂತೆ ಶ್ರಮಿಸಿ ಎಂದು ಸಲಹೆ ನೀಡಿದರು.

ಉಪಾಧ್ಯಕ್ಷ ಶೇಶರಾವ ಮಾನೆ ಮಾತನಾಡಿ, ಛಲವಾದಿ ಸಂಘಟನೆ ಪದಾಧಿಕಾರಿಗಳು ಗ್ರಾಮೀಣ ಭಾಗದ ಜನರ ಸಮಸ್ಯಗಳನ್ನು ಪರಿಹರಿಸಲು ಶ್ರಮಿಸಬೇಕು ಎಂದು ತಿಳಿಸಿದರು.

ಕಾರ್ಯದರ್ಶಿ ಪ್ರಭು ಶಹಾಪೂರ, ರಾಜ್ಯ ಸಮೀತಿ ಸದಸ್ಯ ರಮೇಶ ಹಂಡೇಗಾರ, ತಾಲೂಕಾ ಅಧ್ಯಕ್ಷ ಭೀಮಾಶಂಕರ ಮೂರಮನ್, ಕಾರ್ಯದರ್ಶಿ ಶೇಖರ ಶಿವಶರಣ ವೇದಿಕೆಯಲ್ಲಿದ್ದರು.

ಮಿಲಿಂದ ಹೊಸಮನಿ, ಅಪ್ಪುರಾಜ ಕಾಂಬಳೆ, ಚಂದ್ರಶೇಖರ ಕಟ್ಟಿಮನಿ, ಸದಾಶಿವ ಆಲಮೇ,ಸುನೀಲ ಗಾಯಕವಾಡ, ರಾಜು ಸಿಂಗೆ, ರೋಹಿತ ಕಾಳೆ, ರಾಜಶೇಖರ ಹಳ್ಳದಮನಿ, ಮಹೇಂದ್ರ ಹೊಸಮನಿ ಮತ್ತಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR